ಸಂಪುಟ : 10 ಸಂಚಿಕೆ: 71 ಪುಟ : 4+2 ಬೆಲೆ: 3.00 ಗುರುವಾರ ಎಪ್ರಿಲ್ 17 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 71 Pages : 4+2 Price : 3.00 Thursday April 17 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮಸ್ಕತ್‌ನಲ್ಲಿ 'ಗಡಿನಾಡು ಉತ್ಸವ' ನಾಳೆ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಕಾಸರಗೋಡು ಹಾಗೂ ಓಮನ್ ಘಟಕ ಮಸ್ಕತ್, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಕರ್ನಾಟಕ ಸರ್ಕಾರ, ಓಮಾನಿನ ಎಲ್ಲಾ ಕನ್ನಡಪರ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಮಸ್ಕತ್‌ನಲ್ಲಿ ನಡೆಯುವ 2025ನೇ ಸಾಲಿನ 'ಗಡಿನಾಡು ಉತ್ಸವ' ಕಾರ್ಯಕ್ರಮವನ್ನು ಸಭಾಪತಿ ಬಸವರಾಜ್ ಹೊರಟ್ಟಿಯವರು ಉದ್ಘಾಟಿಸಲಿದ್ದಾರೆಂದು ಸಭಾಪತಿಯವರೊಂದಿಗೆ ಪ್ರವಾಸಕ್ಕೆ ತೆರಳಲಿರುವ ಆಪ್ತ ಕಾರ್ಯದರ್ಶಿ ಡಾ. ವಿಶ್ವನಾಥ ಗುರುಶರಣಯ್ಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಪ್ರಿಲ್ 18ರಂದು ಓಮನ್ ದೇಶದ ಮಸ್ಕತ್‌ನ ಮಜಾನ್ ಹೈಗ್ಲ್ ಸಭಾಂಗಣ, ಇಂಡಿಯನ್ ಸ್ಕೂಲ್ ಬಳಿ ವಾದಿ ಕಬೀರ್ ಮಸ್ಕತ್‌ನಲ್ಲಿ ಏರ್ಪಡಿಸಲಾಗಿದೆ. ಕೇರಳದ ಕನ್ನಡಪರ ಸಂಘಟನೆಗಳ ಒಕ್ಕೂಟವಾದ ಗಡಿನಾಡು ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿಯು ಗಲ್ಫ್ ರಾಷ್ಟ್ರಗಳಲ್ಲಿ ನೆಲೆಸಿರುವ ಗಡಿನಾಡ ಕನ್ನಡಿಗರನ್ನು ಒಗ್ಗೂಡಿಸಿ ಪ್ರತಿವರ್ಷ ಗಡಿನಾಡು ಉತ್ಸವವನ್ನು ಆಚರಿಸುತ್ತಾ ಬರುತ್ತಿದೆ. ಈ ಕಾರ್ಯಕ್ರಮದಲ್ಲಿ ಓಮನ್ ದೇಶದಲ್ಲಿ ನೆಲೆಸಿರುವ ಸುಮಾರು 1000ಕ್ಕೂ ಹೆಚ್ಚು ಗಡಿನಾಡು ಕನ್ನಡಿಗರು ಭಾಗವಹಿಸಲಿದ್ದಾರೆ. ಕರ್ನಾಟಕದ ಅನೇಕ ಜಾನಪದ, ಯಕ್ಷಗಾನ ಇನ್ನಿತರ ಕಲಾ ರೂಪಕಗಳು ಪ್ರದರ್ಶನಗೊಳ್ಳಲಿವೆ.

ಕನ್ನಡದ ನಂಟನ್ನು ಬಿಡದ ಕನ್ನಡಿಗರ ಸ್ವಾಭಿಮಾನವನ್ನು ಹೆಚ್ಚಿಸುವ ಈ ಗಡಿನಾಡು ಉತ್ಸವ ಅತ್ಯಂತ ಅರ್ಥಪೂರ್ಣವಾಗಿ ಜರುಗಲಿದ್ದು, ಸಭಾಪತಿ ಹೊರಟ್ಟಿಯವರು ಚಾಲನೆ ನೀಡಲಿದ್ದಾರೆ ಎಂದು ಡಾ. ವಿಶ್ವನಾಥ ತಿಳಿಸಿದ್ದಾರೆ.

### ಸಚಿವ ಎಚ್.ಕೆ. ಪಾಟೀಲರಿಂದ 5ನೇ ಸಾಹಿತ್ಯ ಸಮ್ಮೇಳನ ಉದ್ಘಾಟನೆ

# ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕು ಮಟ್ಟದ 5ನೇ ಕನ್ನಡ ಸಾಹಿತ್ಯ ಸಮ್ಮೇಳನ ಎಪ್ರಿಲ್ 18ರಂದು ಕುರ್ತಕೋಟಿ ಗ್ರಾಮದ ಸಂತೆ ಮಾರುಕಟ್ಟೆ ಪ್ರಾಂಗಣದಲ್ಲಿ ಜರುಗಲಿದೆ ಎಂದು ಕಸಾಪ ತಾಲೂಕು ಘಟಕದ ಅಧ್ಯಕ್ಷೆ ಡಾ. ರಶ್ಮಿ ಅಂಗಡಿ ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಸಮ್ಮೇಳನವು ಜಿಲ್ಲಾ ಮತ್ತು ರಾಜ್ಯ ಮಟ್ಟದ ಕಾರ್ಯಕ್ರಮವಾಗಿ ಪರಿಣಮಿಸುವಂತೆ ನಮ್ಮ ಪ್ರಯತ್ನ ನಡೆದಿದೆ. ಅಂದು ಬೆಳಗ್ಗೆ 8 ಗಂಟೆಗೆ ರಾಷ್ಟ್ರಧ್ವಜ ಮತ್ತು ಪರಿಷತ್ತಿನ ಧ್ವಜಾರೋಹಣ ನೆರವೇರಲಿದೆ. 8.30ಕ್ಕೆ ಕನ್ನಡ ತಾಯಿ ಭುವನೇಶ್ವರಿಯ ಭಾವಚಿತ್ರ ಹಾಗೂ ಸಮ್ಮೇಳನದ ಸರ್ವಾಧ್ಯಕ್ಷ ಜೆ.ಕೆ. ಜಮಾದಾರ ಅವರ




ಮೆರವಣಿಗೆ, 10 ಗಂಟೆಗೆ ಸಮ್ಮೇಳನ ಉದ್ಘಾಟನಾ ಸಮಾರಂಭ ನಡೆಯಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಜ. ಅಭಿನವ ಬೂದೀಶ್ವರ ಸ್ವಾಮೀಜಿ ವಹಿಸುವರು. ಸಭಾಪತಿ ಬಸವರಾಜ ಹೊರಟ್ಟಿ, ನಿಕಟಪೂರ್ವ ಅಧ್ಯಕ್ಷೆ ಡಾ. ನೀಲಮ್ಮ ತಾಯಿಯವರು ಅಸುಂಡಿ ಘನ ಉಪಸ್ಥಿತಿ ವಹಿಸುವರು. ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಸಮ್ಮೇಳನ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿ, ರೋಣ ಶಾಸಕ ಜಿ.ಎಸ್. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ, ಸಂಕನೂರ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ಡಿ.ಆರ್. ಪಾಟೀಲ ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ನಿವೃತ್ತ ಉಪನ್ಯಾಸಕ ಕೆ.ಎಚ್. ಬೇಲೂರ, ಜಿ.ಎನ್. ಪಾಟೀಲ, ಬಿ.ಸಿ. ಲಕ್ಕುಂಡಿ, ರಾಘವೇಂದ್ರ ಹೊಸಮನಿ, ಕರಿಯಪ್ಪ ಕೊಡವಳ್ಳಿ, ಮಂಜುನಾಥ ಜಕ್ಕಲಿ, ಕಿಶೋರ್ ಬಾಬು ನಾಗರಕಟ್ಟಿ ಇದ್ದರು.

> ಇದೇ ಸಂದರ್ಭದಲ್ಲಿ ಹಲವು ಕೃತಿಗಳ ಬಿಡುಗಡೆ ನೆರವೇರಲಿದ್ದು, ವಿದ್ಯಾದಾನ ಸಮಿತಿಯ ಜೆ.ಎನ್. ಚಿತ್ರಕಲಾ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಂದ ಹಾಗೂ ಕುರ್ತಕೋಟಿ ಗ್ರಾಮದ ಕಲಾವಿದರಿಂದ, ಚಿಣ್ಣರ ಚಿತ್ರಕಲಾ ಪ್ರದರ್ಶನ ನಡೆಯಲಿದೆ ಎಂದು ಡಾ. ರಶ್ಮಿ ಅಂಗಡಿ ಮಾಹಿತಿ ನೀಡಿದರು.

# ಸರ್ಕಾರದ ಜಾತಿ ಗಣತಿಗೆ ವಿರೋಧ

■ವಿಜಯಸಾಕ್ಷಿ ಸುದ್ದಿ, ಗದಗ

ಕಾಂತರಾಜ ಆಯೋಗದ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಜನಗಣತಿ-2015ರ ವರದಿಯಲ್ಲಿ ವೀರಶೈವ ಲಿಂಗಾಯತ ರೆಡ್ಡಿ ಸಮಾಜ ಕೇವಲ 33606 ಜನಸಂಖ್ಯೆ ಹೊಂದಿದೆ ಎಂದು ಉಲ್ಲೇಖಿಸಿದೆ. ಆದರೆ ವಾಸ್ತವದಲ್ಲಿ ನಾವು 4 ಲಕ್ಷಕ್ಕೂ ಹೆಚ್ಚು ಜನಸಂಖ್ಯೆ ಹೊಂದಿದ್ದೇವೆ ಎಂದು ಕರ್ನಾಟಕ ರಾಜ್ಯ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ವೀರಶೈವ ಲಿಂಗಾಯತ ರಡ್ಡಿ ಸಮಾಜಂದ ರಾಜ್ಯಾಧ್ಯಕ್ಷ ಶೇಖರಗೌಡ ಮಾಲೀಪಾಟೀಲ ತಿಳಿಸಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಸರಕಾರ ನಡೆಸಿದ ಜಾತಿ ಜನಗಣತಿಯನ್ನು ನಾವು ವಿರೋಧಿಸುತ್ತೇವೆ.




ನಮ್ಮ ಸಮುದಾಯ ಉತ್ತರ ಕರ್ನಾಟಕದಲ್ಲಿ ಹೆಚ್ಚಿನ ಜನಸಂಖ್ಯೆ ಹೊಂದಿದ್ದರೂ ಕಾಂತರಾಜು ಆಯೋಗದ ವರದಿಯಲ್ಲಿ ಸುಳ್ಳು ಮಾಹಿತಿ ಅಡಕವಾಗಿದೆ ಎಂದು ಆರೋಪಿಸಿದರು.

ಅವೈಜ್ಞಾನಿಕವಾಗಿರುವ ಈ ವರದಿಯನ್ನು ಸರಕಾರ ಜಾರಿಗೊಳಿಸಬಾರದು. ರಾಜ್ಯದಲ್ಲಿರುವ ರಡ್ಡಿ ಸಮುದಾಯದ ಎಲ್ಲ ಜನಪ್ರತಿನಿಧಿಗಳು, ಶಾಸಕರು ಈ ವರದಿಯನ್ನ ವಿರೋಧಿಸಬೇಕು ಎಂದು ವಿನಂತಿಸಿದರು.

ಸಂಘದ ಯುವ ಘಟಕದ ರಾಜ್ಯಾಧ್ಯಕ್ಷ ಅನಿಲಕುಮಾರ ತೆಗ್ಗಿನಕೇರಿ ಮಾತನಾಡಿ, ರಾಜ್ಯದಲ್ಲಿ ವೀರಶೈವ ಲಿಂಗಾಯತ ರಡ್ಡಿ ಸಮಾಜ ನಿಖರತೆ ಇಲ್ಲದ ಸಮೀಕ್ಷೆಯನ್ನ ಸರಕಾರ ನಡೆಸಿದ್ದು, ರಡ್ಡಿ ಲಿಂಗಾಯತ ಸಮುದಾಯದ ಜನಸಂಖ್ಯೆಯನ್ನು ನಾವೇ ಸಮೀಕ್ಷೆ ನಡೆಸಿ ವರದಿ ನೀಡುತ್ತೇವೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ರಡ್ಡಿ ಲಿಂಗಾಯತ ಸಮಾಜದ ಗದಗ ಜಿಲ್ಲಾಧ್ಯಕ್ಷ ಕುಮಾರ ಗಡಗಿ, ಕಾರ್ಯಾಧ್ಯಕ್ಷ ಸುರೇಶ ಶಿರೋಳ, ಉಪಾಧ್ಯಕ್ಷ ಭೀಮರಡ್ಡೆಪ್ಪ ರಡ್ಡೇರ, ಯುವ ಘಟಕದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ರಡ್ಡೇರ, ರೋಣ ತಾಲೂಕು ಯುವ ಘಟಕದ ಅಧ್ಯಕ್ಷ ವಿಜಯಗೌಡ ಪಾಟೀಲ ಇದ್ದರು.

## ಅರೆಕಾಲಿಕ ಶಿಕ್ಷಕರನ್ನು ಪಡೆಯಲು ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಡಿಯಲ್ಲಿ ಬರುವ ಸರ್ಕಾರಿ ಬಾಲಕ/ಬಾಲಕಿಯರ ಬಾಲಮಂದಿರಗಳಲ್ಲಿ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಾಗಿ ಆರ್ಟ್ ಮತ್ತು ಕ್ರಾಫ್ಟ್ ಶಿಕ್ಷಕರು, ಸಂಗೀತ ಶಿಕ್ಷಕರು, ದೈಹಿಕ/ಯೋಗ, ಗಣಿತ/ವಿಜ್ಞಾನ, ಇಂಗ್ಲೀಷ್ ಶಿಕ್ಷಕರನ್ನು ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು.

ಈ ಮೇಲಿನ ಹುದ್ದೆಗಳು ತಾತ್ಕಾಲಿಕವಾಗಿದ್ದು, (1 ವರ್ಷಕ್ಕೆ ಮಾತ್ರ ಅನ್ವಯವಾಗುವಂತೆ) ಯಾವುದೇ ಸಂದರ್ಭದಲ್ಲಿ ಖಾಯಂಗೊಳಿಸಲಾಗುವುದಿಲ್ಲ. ಅರ್ಜಿಗಳನ್ನು ಮೇ 2ರ ಸಾಯಂಕಾಲ 5.30ರೊಳಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾಡಳಿತ ಭವನ, ಎರಡನೇ ಮಹಡಿ, ರೂ ನಂ-225 ಇಲ್ಲಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ.

### ಕಾಂಗ್ರೆಸ್ ಸರ್ಕಾರ ತೆಗೆಯಲು ಪ್ಲಾನ್: ಮಲ್ಲಿಕಾರ್ಜುನ ಖರ್ಗೆ ಆರೋಪ

■ವಿಜಯಸಾಕ್ಷಿ ಸುದ್ದಿ, ಕಲಬುರಗಿ

ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ತೆಗೆಯಲು ಪ್ಲಾನ್ ನಡೆದಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬಿಜೆಪಿಯ ಕೇಂದ್ರ ನಾಯಕರ ವಿರುದ್ಧ ಆರೋಪಿಸಿದ್ದಾರೆ.

ಕಲಬುರಗಿಯಲ್ಲಿ ಮಾತನಾಡಿದ ಅವರು, ಕರ್ನಾಟಕದಲ್ಲಿನ ಕಾಂಗ್ರೆಸ್ ಸರ್ಕಾರ ತೆಗೆಯಲು ಪ್ಲಾನ್ ನಡೆದಿದೆ. ಪ್ರಧಾನಿ ನರೇಂದ್ರ ಮೋದಿ ನಿಮ್ಮ ಸರ್ಕಾರವನ್ನು ಬೀಳಿಸುತ್ತಾರೆ ಎಂದು ಹೇಳಿದ್ದಾರೆ.

## ಬಸವೇಶ್ವರ ಜಯಂತಿಯ ಪೂರ್ವಭಾವಿ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಜಗಜ್ಯೋತಿ ಬಸವೇಶ್ವರ ಜಯಂತಿಯನ್ನು ಎಪ್ರಿಲ್ 30ರಂದು ಬೆಳಿಗ್ಗೆ 11 ಗಂಟೆಗೆ ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಅರ್ಥಪೂರ್ಣವಾಗಿ ಹಾಗೂ ಸುವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಗಜ್ಯೋತಿ ಬಸವೇಶ್ವರ ಜಯಂತಿ ಪ್ರಯುಕ್ತ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾರ್ಯಕ್ರಮಕ್ಕೂ ಮುನ್ನ ಜಗಜ್ಯೋತಿ ಬಸವೇಶ್ವರರ ಭಾವಚಿತ್ರಗಳನ್ನೊಳಗೊಂಡ ಮೆರವಣಿಗೆಯು ನಗರದ ವಿವಿಧ ವೃತ್ತಗಳಲ್ಲಿ ಸಂಚರಿಸಿ ಕಾರ್ಯಕ್ರಮದ ಸ್ಥಳಕ್ಕೆ ಬಂದು ತಲುಪಲಿದೆ. ಕಾರ್ಯಕ್ರಮದಲ್ಲಿ ಸಂಗೀತಗಾರರು ಬಸವೇಶ್ವರರ ವಚನಗಳನ್ನು ಪ್ರಸ್ತುತಪಡಿಸಲಿದ್ದಾರೆ. ಜಗಜ್ಯೋತಿ ಬಸವೇಶ್ವರರ ಕುರಿತು ಆಳವಾಗಿ ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಿಸಲು ಕ್ರಮ ವಹಿಸಬೇಕು. ಎಲ್ಲ ಅಧಿಕಾರಿಗಳು ಜಯಂತಿ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಎಲ್ಲರೂ ಹಾಜರಿರಬೇಕು. ಒಟ್ಟಾರೆಯಾಗಿ ಜಗಜ್ಯೋತಿ ಬಸವೇಶ್ವರ ಜಯಂತಿಯನ್ನು ಅಚ್ಚುಕಟ್ಟಾಗಿ ನಡೆಸಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ವೇದಿಕೆ ವ್ಯವಸ್ಥೆ, ಅಲ್ಪೋಪಹಾರ, ಬ್ಯಾನರ್ ಅಳವಡಿಕೆ ಕುರಿತು ಚರ್ಚಿಸಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಸರ್ವರನ್ನು ಸ್ವಾಗತಿಸಿ ವಂದಿಸಿದರು. ಸಭೆಯಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು, ಸಮುದಾಯದ ಮುಖ್ಯಸ್ಥರು, ಗಣ್ಯರು, ಹಿರಿಯರು ಹಾಜರಿದ್ದರು.

### ಎಪಿಎಂಸಿ ಪ್ರಾಂಗಣದಲ್ಲಿ ಹೋಲ್‌ಸೇಲ್ ಹಣ್ಣಿನ ಮಳಿಗೆಗಳನ್ನು ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಗುಣಮಟ್ಟದ ಹಣ್ಣು ಗ್ರಾಹಕರಿಗೆ ಲಭ್ಯವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಮಾರುಕಟ್ಟೆಯಲ್ಲಿ ಹೂವು-ಹಣ್ಣು ವ್ಯಾಪಾರ ವಹಿವಾಟುಗಳನ್ನು ವೃದ್ಧಿಸಲು ಸಾಕಷ್ಟು ಅವಕಾಶಗಳಿದ್ದು, ಬೆಳೆಗಾರರು, ವ್ಯಾಪಾರಸ್ಥರು ಗ್ರಾಹಕರಿಗೆ ವೈವಿಧ್ಯಮಯ ಹಣ್ಣು-ಹಂಪಲುಗಳನ್ನು ಪೂರೈಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು. ಅವರು ಬುಧವಾರ ಗದಗ ಎಪಿಎಂಸಿ ಪ್ರಾಂಗಣದಲ್ಲಿ ಹೋಲ್‌ಸೇಲ್ ಹಣ್ಣಿನ ಮಳಿಗೆಗಳನ್ನು ಉದ್ಘಾಟಿಸಿ ಮಾತನಾಡಿ, ಬೆಂಗಳೂರಿನಲ್ಲಿ ಲಭ್ಯವಾಗುವ ಎಲ್ಲ ರೀತಿಯ ಹಣ್ಣು-ಹಂಪಲುಗಳು ಗದುಗಿನ ಮಾರುಕಟ್ಟೆಯಲ್ಲಿಯೂ ಗ್ರಾಹಕರಿಗೆ ಲಭ್ಯವಾಗುವ ಮೂಲಕ ಅವರ ಆರೋಗ್ಯದಲ್ಲಿಯೂ ಗುಣಾತ್ಮಕ ಬದಲಾವಣೆ ಬರುವಂತಾಗಲಿ ಎಂದರು.

ಗದಗ ಎಪಿಎಂಸಿ ಮಾರುಕಟ್ಟೆಯಲ್ಲಿ ಈಗಾಗಲೇ




ದಿನಸಿ, ಒಣಮೆಣಸಿನಕಾಯಿ, ಹೂವು ಒಂದೇ ಕಡೆ ವಹಿವಾಟು ನಡೆದುಕೊಂಡು ಬಂದಿದ್ದು, ಇದೀಗ ಹೋಲ್‌ಸೇಲ್ ಹಣ್ಣಿನ ಮಳಿಗೆಗಳೂ ಸಹ ಇಲ್ಲಿ ಶುಭಾರಂಭಗೊಂಡಿದ್ದು ಇನ್ನು ಮುಂದೆ ಗದಗ ಗ್ರೇನ್ ಮಾರುಕಟ್ಟೆಯಲ್ಲಿ ನಡೆಯುತ್ತಿದ್ದ ಈ ವಹಿವಾಟು ಎಪಿಎಂಸಿಯಲ್ಲಿ ನಡೆಯಬೇಕು.

> ಕೇವಲ ಅನಾರೋಗ್ಯ ಇದ್ದವರು ಹಣ್ಣು-ಹಂಪಲು ಸೇವಿಸುವ ಪದ್ಧತಿ ಒಂದು ಕಾಲದಲ್ಲಿತ್ತು. ಜನತೆಯ ಆಹಾರ ಪದ್ಧತಿಯೂ ಬದಲಾಗಿದೆ. ಎಲ್ಲ ಬಗೆಯ ಹಣ್ಣುಗಳು ಗದಗ ಜಿಲ್ಲೆಯಲ್ಲಿ ಬೆಳೆಯುವಂತಾಗಲಿ. ಗುಣಮಟ್ಟದ ಹಣ್ಣು ಗ್ರಾಹಕರಿಗೆ ಸಿಗುವಂತಾಗಲಿ. ಹೋಲ್‌ಸೇಲ್ ಹಣ್ಣಿನ ದಲಾಲರು ಒಗ್ಗಟ್ಟಿನಿಂದ ಎಪಿಎಂಸಿಯಲ್ಲಿ ವ್ಯಾಪಾರ ನಡೆಸಲಿ.
>
> **– ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

> ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದ ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಡಾ. ಕಲ್ಲಯ್ಯಜ್ಜನವರು, ವ್ಯಾಪಾರ ವಹಿವಾಟಿನಲ್ಲಿ ಸತ್ಯ, ನಿಷ್ಠೆ, ಪ್ರಾಮಾಣಿಕತೆ ಇರಲಿ. ಧರ್ಮ ಮತ್ತು ನ್ಯಾಯದ ದುಡಿಮೆ ನಿಶ್ಚಿತವಾಗಿಯೂ ಫಲ ನೀಡಬಲ್ಲದು. ಹೂವು ಮತ್ತು ಹಣ್ಣಿನ ಮಳಿಗೆಯ ವ್ಯಾಪಾರ ವಹಿವಾಟು ಎಪಿಎಂಸಿಯಲ್ಲಿ ಉತ್ತಮ ರೀತಿಯಲ್ಲಿ ನಡೆಯಲಿ. ಇದಕ್ಕೆ ಗುರು ಪಂಚಾಕ್ಷರ, ಪುಟ್ಟರಾಜರ ಕೃಪೆ ಸದಾವಕಾಲ ಇದೆ ಎಂದರು.

ಅದಕ್ಕೆ ಎಪಿಎಂಸಿ ಕಾರ್ಯದರ್ಶಿಗಳು ಎಲ್ಲ ರೀತಿಯ ಕ್ರಮ ಕೈಗೊಳ್ಳಬೇಕಲ್ಲದೆ, ವ್ಯಾಪಾರಸ್ಥರ ಬೇಡಿಕೆ-ಯಂತೆ ಸಿಸಿ ರಸ್ತೆ ಹಾಗೂ ಬೀದಿ ದೀಪದ ವ್ಯವಸ್ಥೆಗಾಗಿ ಕ್ರಿಯಾಯೋಜನೆ ಸಿದ್ಧಪಡಿಸಿ 15 ದಿನಗಳಲ್ಲಿ ಭೂಮಿ ಪೂಜೆ ಜರುಗಿಸಬೇಕೆಂದು ಸೂಚಿಸಿದರು. ಮುಖ್ಯ ಅತಿಥಿಗಳಾಗಿ ಗಣ್ಯರಾದ ಕೃಷ್ಣಾ ಪರಾಪೂರ, ಪೀರಸಾಬ ಕೌತಾಳ, ಬಿ.ಬಿ. ಅಸೂಟಿ, ಸುವರ್ಣಾ ವಾಲಿಕಾರ, ಸುಧಾ ಬಂಡಿ, ಎಂ.ಆರ್. ನದಾಫ್, ಸಾದಿಕ್ ನರಗುಂದ, ಸುರೇಶ ಕಟ್ಟಿಮನಿ, ಬರಕತ್‌ಅಲಿ ಮುಲ್ಲಾ, ರಿಯಾಜ್‌ಅಹ್ಮದ್ ಅತ್ತಾರ, ರಮೇಶ ಮುಳಗುಂದ, ಅಬ್ದುಲ್‌ರೆಹಮಾನ್ ಹುಯಿಲಗೋಳ, ಮಕ್ಬುಲ್‌ಸಾಬ ಶಿರಹಟ್ಟಿ, ಚಂದ್ರು ಬಾಳಿಹಳ್ಳಿಮಠ, ಬಾಷಾಸಾಬ ಮಲ್ಲಸಮುದ್ರ, ಐ.ಬಿ. ದಾವಲಸಾಬ, ರಮೇಶ್ ಶೆಟ್ಟೆಪ್ಪನವರ ಜೆ.ಸಿ. ಶಿರಹಟ್ಟಿ ಪಾಲ್ಗೊಂಡಿದ್ದರು. ವೇದಿಕೆಯ ಮೇಲೆ ಹೋಲ್‌ಸೇಲ್ ಹಣ್ಣಿನ ಮಳಿಗೆಗಳ ದಲಾಲರ ಸಂಘದ ಗೌರವ ಅಧ್ಯಕ್ಷ ಮುನೀರ್ ನರೇಗಲ್, ಅಧ್ಯಕ್ಷ ಅಶ್ರಫ್‌ಅಲಿ ನಸಬಿ, ಉಪಾಧ್ಯಕ್ಷ ಬಸಪ್ಪ ಲಕ್ಕುಂಡಿ, ಕಾರ್ಯದರ್ಶಿ ಮೆಹರ್‌ಅಲಿ ಢಾಲಾಯತ್ ಉಪಸ್ಥಿತರಿದ್ದರು. ಪ್ರಾರಂಭದಲ್ಲಿ ಮೌಲಾನಾ ಹಾಫೀಜ್ ಹುಸೇನಸಾಬ ಬಾಗಲಿ ಕುರಾನ್ ಪಠಿಸಿದರೆ, ಅಬ್ದುಲ್‌ರೆಹಮಾನ ಹುಯಿಲಗೋಳ ಸ್ವಾಗತಿಸಿದರು. ಬಾಷಾಸಾಬ ಮಲ್ಲಸಮುದ್ರ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ.ಬಾಹುಬಲಿ ಜೈನರ್ ನಿರೂಪಿಸಿದರು. ಕೊನೆಗೆ ಮಹ್ಮದ್‌ಅಲಿ ರೋಣ ವಂದಿಸಿದರು.

ಕಾರ್ಯಕ್ರಮದಲ್ಲಿ ಹೋಲ್‌ಸೇಲ್ ಹಣ್ಣಿನ ವ್ಯಾಪಾರಸ್ಥರಾದ ಅಲಿ ಹುಯಿಲಗೋಳ, ಕರಿಯಪ್ಪ ಹಂಜಗಿ, ರೆಹಾನ್ ಕಾಟಾಪೂರ, ಆಝಾದ್ ಶಿರಹಟ್ಟಿ, ಬಸಪ್ಪ ಲಕ್ಕುಂಡಿ, ಮೆಹಬೂಬಸಾಬ ಶಿರಹಟ್ಟಿ, ಅಜರ್ ಶಿರಹಟ್ಟಿ, ಸರ್ಫರಾಜ ಈಟಿ, ಮುನೀರ್ ನರೇಗಲ್ಲ, ಅಬ್ದುಲ್‌ರಜಾಕ್ ಮುಲ್ಲಾ, ಅಬ್ದುಲ್ ಕಾಟಾಪೂರ, ಇಲಿಯಾಸ್ ಶಿರಹಟ್ಟಿ, ಸಲೀಮ್ ಡಾಲಾಯತ್ ಮುಂತಾದವರು. ಪಾಲ್ಗೊಂಡಿದ್ದರು.

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ

–ಸುಭಾಷಿತ

## ಸಂಪಾದಕೀಯ

# ಜಾತಿ ಜನಗಣತಿ ಮತ್ತು ಸಿದ್ದರಾಮಯ್ಯ ತಂತ್ರಗಾರಿಕೆ

ರಾಜ್ಯ ರಾಜಕೀಯದಲ್ಲಿ ಸಿದ್ದರಾಮಯ್ಯ ವಿಶಿಷ್ಟವಾಗಿ ನಿಲ್ಲುವ ವ್ಯಕ್ತಿ. ತಮ್ಮ ಚಾಣಾಕ್ಷ ನಡೆಯಿಂದ ರಾಜ್ಯದ ಜ್ವಲಂತ ಸಮಸ್ಯೆಗಳನ್ನ ಮರಮಾಚಿ ರಾಜ್ಯದ ಜನರನ್ನ ಜಾತಿ ಜನಗಣತಿ ವಿಚಾರಕ್ಕೆ ಸೀಮಿತಗೊಳಿಸುವಂತೆ ಮಾಡಿದ್ದಾರೆ.

ಈ ಹಿಂದೆ ಮುಖ್ಯಮಂತ್ರಿ ಆಗಿದ್ದಾಗಲೇ ಸಿದ್ದರಾಮಯ್ಯ ಕಾಂತರಾಜು ಆಯೋಗವನ್ನು ನೇಮಕ ಮಾಡಿದ್ದರು. ಆದರೆ ಸಕಾಲದಲ್ಲಿ ವರದಿ ಸ್ವೀಕರಿಸದಂತೆ ನೋಡಿಕೊಂಡರು. ಮುಂದೆ ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರವು ಈ ಜನಗಣತಿ ವರದಿಯನ್ನ ಸ್ವೀಕಾರ ಮಾಡದಂತೆ ಇಕ್ಕಟ್ಟಿಗೆ ಸಿಲುಕಿಸಿದರು.

ಆದರೆ ಮತ್ತೊಮ್ಮೆ ಅಧಿಕಾರಕ್ಕೆ ಬಂದ ಸಿದ್ದರಾಮಯ್ಯ ಆಗಾಗ ಕಾಂತರಾಜು ಆಯೋಗದ ವರದಿ ಜಾರಿ ಬಗ್ಗೆ ಮಾತನಾಡುತ್ತಲೇ ಇದ್ದರು. ಯಾವಾಗ ರಾಜ್ಯ ರಾಜಕೀಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಚರ್ಚೆ ಶುರುವಾಯಿತು, ಜಾತಿ ಜನಗಣತಿ ವರದಿಯನ್ನ ಮುನ್ನಲೆಗೆ ತಂದು ಆ ಎಲ್ಲಾ ಚರ್ಚೆಗಳಿಗೆ ಇತಿಶ್ರೀ ಹಾಡಿದರು.

ಒಟ್ಟಾರೆ ಜಾತಿ ಜನಗಣತಿಯಲ್ಲಿ ಧರ್ಮಧಾರಿತವಾಗಿ ಮುಸ್ಲಿಂ ಸಮುದಾಯದ ಜನಸಂಖ್ಯೆಯನ್ನು ದೊಡ್ಡದಾಗಿ ತೋರಿಸಿ, ಇನ್ನುಳಿದ ಜಾತಿಗಳ ಜನಸಂಖ್ಯೆಯನ್ನು ಕಡಿಮೆ ತೋರಿಸುವ ಮೂಲಕ ರಾಜ್ಯದಲ್ಲಿ ಸಂಘರ್ಷಕ್ಕೆ ನಾಂದಿ ಹಾಡಿದರು.

ಆ ಮೂಲಕ ಮುಖ್ಯಮಂತ್ರಿ ಮೇಲಿನ ಮುಡಾ ಹಗರಣ, ಸಂಪುಟ ವಿಸ್ತರಣೆ ಹಾಗೂ ಇನ್ನಿತರ ಸಮಸ್ಯೆಗಳ ಬಗ್ಗೆ ಚರ್ಚೆ ಬೆಳೆಯದಂತೆ ನೋಡಿಕೊಂಡರು. ಅಷ್ಟೇ ಅಲ್ಲದೆ ರಾಜ್ಯದಲ್ಲಿ ಬೇಸಿಗೆ ಸಂದರ್ಭದಲ್ಲಿ ಎದುರಾಗುವ ಕುಡಿಯುವ ನೀರು, ಮೇವು ಮತ್ತಿತರ ಸಮಸ್ಯೆಗಳು ಚರ್ಚೆಗೆ ಬರದಂತೆ ಜಾತಿ ಜನಗಣತಿಯನ್ನ ಬಳಸಿಕೊಂಡರು. ಆ ಕಾರಣಕ್ಕಾಗಿಯೇ ಅವರು ಚಾಣಾಕ್ಷ ರಾಜಕೀಯ ನೇತಾರ.

### ಕೇಂದ್ರ, ರಾಜ್ಯ ಸರ್ಕಾರದ ಬೆಲೆ ಏರಿಕೆ ಖಂಡಿಸಿ ಸ್ಲಂ ಸಮಿತಿಯಿಂದ ಪ್ರತಿಭಟನೆ

# ಸರ್ಕಾರಗಳಿಂದ ಬಡ ಜನರ ಸುಲಿಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿರುವುದರಿಂದ ಬಡ ಮತ್ತು ಮಧ್ಯಮ ವರ್ಗದ ಜನರು ಹೈರಾಣಾಗಿದ್ದಾರೆ. ರಾಜ್ಯದಲ್ಲಿ ನಿರಂತರ ಗಗನಕ್ಕೇರುತ್ತಿರುವ ದಿನ ಬಳಕೆ ವಸ್ತುಗಳಿಂದ ಜನರ ಜೀವನವನ್ನು ಮತ್ತಷ್ಟು ಹಾಳು ಮಾಡುತ್ತಿವೆ. ಕೂಡಲೇ ಸರ್ಕಾಗಳು ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ಹಿಂಪಡೆಯಬೇಕೆಂದು ಆಗ್ರಹಿಸಿ ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಮಿತಿಯ ಕರೆಯ ಮೇರೆಗೆ ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿ



ಮನವಿ ಸಲ್ಲಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಜನರಿಂದ ಮಿತಿಮೀರಿ ತೆರಿಗೆ ವಸೂಲಿ ಮಾಡುವ ಮೂಲಕ ಜನರನ್ನು ಸುಲಿಗೆ ಮಾಡಲು ಹೊರಟಿದೆ. ಕೇಂದ್ರ ಸರ್ಕಾರದ ಆಡಳಿತ ವೈಫಲ್ಯ ಹಾಗೂ ಆರ್ಥಿಕ ನೀತಿಯಿಂದ ಆರ್ಥಿಕ ವ್ಯವಸ್ಥೆ ನಿಯಂತ್ರಣ ತಪ್ಪಿದೆ. ಜನರ ಕಲ್ಯಾಣಕ್ಕಿಂತ ತಮ್ಮ ಆರ್ಥಿಕ ಹಿತಾಸಕ್ತಿಗಳಿಗೆ ಆದ್ಯತೆ ನೀಡುತ್ತಿರುವುದು ಖಂಡನೀಯ. ರಾಜ್ಯ ಸರ್ಕಾರದಿಂದ ಅಗತ್ಯ ವಸ್ತುಗಳ

> ಬೆಲೆ ಏರಿಕೆಯಿಂದ ಸರ್ಕಾರಗಳು ಬಡವರು ಮತ್ತು ಮಧ್ಯಮ ವರ್ಗದವರನ್ನು ಮತ್ತಷ್ಟು ಆರ್ಥಿಕ ಸಂಕಷ್ಟಕ್ಕೆ ಸಿಲುಕಿಸಿದೆ. ಇಂತಹ ಜನವಿರೋಧಿ ನೀತಿಗಳನ್ನು ಕೈಬಿಟ್ಟು ಜನಪರವಾದ ಯೋಜನೆಗಳು ಜಾರಿಗೆ ತರಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಬೆಲೆ ಏರಿಕೆಯಾಗುತ್ತಿರುವುದರಿಂದ ಪಂಚ ಗ್ಯಾರಂಟಿ ಯೋಜನೆ ಮಹತ್ವ ಕಳೆದುಕೊಳ್ಳುತ್ತಿದೆ. ಇವರಿಗೆ ಜನರಿಗೆ ಬಗ್ಗೆ ಯಾವುದೇ ಕಾಳಜಿ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಪರವೀನಬಾನು ಹವಾಲ್ದಾರ, ಮೆಹರುನಿಸಾ ಡಂಬಳ, ಇಬ್ರಾಹಿಂ ಮುಲ್ಲಾ, ಮೆಹಬೂಬಸಾಬ ಬಳ್ಳಾರಿ, ಸಾಕ್ರುಬಾಯಿ ಗೋಸಾವಿ, ಸಂಕ್ರಪ್ಪ ಮೂಲಿಮನಿ, ಮುನ್ನಾ ಅಗಡಿ, ಮೈಮುನ ಬೈರಕದಾರ, ಮಕ್ತುಮಸಾಬ ಮುಲ್ಲಾನವರ, ದಾದು ಗೋಸಾವಿ, ಬಾಷಾಸಾಬ ಡಂಬಳ, ಮೌಲಾಸಾಬ ಗಚ್ಚಿ, ಖಾಜಾಸಾಬ ಬಳ್ಳಾರಿ, ಮುತ್ತಣ್ಣ ಅಣ್ಣಿಗೇರಿ, ರಾಮಪ್ಪ ಕೊಪ್ಪಳ, ಕಾಶೀಮಸಾಬ ಬೈರಕದಾರ ಹಾಗೂ ಗದಗ-ಬೆಟಗೇರಿ ನಗರದ ಸ್ಲಂ ನಿವಾಸಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಸಿಎಂ ಬದಲಾವಣೆ ಒಪ್ಪಂದ ಆಗಿರುವುದು ನೂರಕ್ಕೆ ನೂರು ಸತ್ಯ: ಆರ್. ಅಶೋಕ್

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಸಿಎಂ ಬದಲಾವಣೆ ಒಪ್ಪಂದ ಆಗಿರುವುದು ನೂರಕ್ಕೆ ನೂರು ಸತ್ಯ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಹೇಳಿದ್ದಾರೆ.

ಬ೯ಳ೯ಗಾವಿ೦ಂ೯ುಲ್ಲಿ ಮಾತನಾಡಿದ ಅವರು, ಸಿಎಂ ಬದಲಾವಣೆ ಒಪ್ಪಂದ ಆಗಿರುವುದು ನೂರಕ್ಕೆ ನೂರಕ್ಕೆ ಸತ್ಯ. ಆಗ ಒಪ್ಪಿ ಸಿದ್ದರಾಮಯ್ಯ ಈಗ ಮಾತು ತಪ್ಪುತ್ತಿದ್ದಾರೆ. ಅದಕ್ಕೆ ಈಗ ಸಿದ್ದರಾಮಯ್ಯ ಜಾತಿಗಣತಿ ವರದಿ ಮಂಡಿಸಿದ್ದಾರೆ.



ಅಧಿಕಾರ ಬಿಟ್ಟು ಕೊಡದಿದ್ದರೆ ಕಾಂಗ್ರೆಸ್‌ನಲ್ಲಿ ದಂಗೆ ಆಗಲಿದೆ" ಎಂದು ಭವಿಷ್ಯ ನುಡಿದಿದ್ದಾರೆ.

ಬಿಜೆಪಿ ಸರ್ಕಾರವೇ ಉತ್ತಮ ಎಂದು ಹಲವರು ಹೇಳುತ್ತಿದ್ದಾರೆ.

ಕಾಂಗ್ರೆಸ್‌ಗೆ 10 ರೂ. ಕೊಡುವ ಯೋಗ್ಯತೆ ಇಲ್ಲ. ಗುತ್ತಿಗೆದಾರರ, ಅಧಿಕಾರಿಗಳ ಆತ್ಮಹತ್ಯೆ ಆಗುತ್ತಿವೆ. ಆದರೂ ಸರ್ಕಾರ ತಲೆಕೆಡಿಸಿಕೊಳ್ಳುತ್ತಿಲ್ಲ. ಮೋದಿ ಅವರು ಸಿಲಿಂಡರ್ ಬೆಲೆ ಎರಡು ಬಾರಿ ಇಳಿಸಿದ್ದಾರೆ.

ಈಗ ಜಾಸ್ತಿ ಮಾಡಿದ್ದಾರೆ. ಕಾಂಗ್ರೆಸ್ ಯಾವುದಾದರೂ ಇಳಿಸಿ ಜಾಸ್ತಿ ಮಾಡಿದ್ದರೆ ಆಗ ನಾನು ಒಪ್ಪುತ್ತಿದ್ದೆ. ಈಗ ಎಲ್ಲದರ ಮೇಲೂ ತೆ-ರಿಗೆ ಹೆಚ್ಚಾಗಿದೆ ಎಂದು ಆರೋಪಿಸಿದ್ದಾರೆ.

# 1ನೇ ತರಗತಿ ಸೇರ್ಪಡೆಗೆ ವಯೋಮಿತಿ ಸಡಿಲ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

1ನೇ ತರಗತಿಗೆ 5 ವರ್ಷ 5 ತಿಂಗಳು ದಾಖಲಾತಿ ಮಿತಿ ಸಡಿಲಿಕೆ ಮಾಡಲಾಗಿದೆ. ಇದು ಕೇವಲ ರಾಜ್ಯಪತ್ಯ ಕ್ರಮಕ್ಕೆ ಮಾತ್ರ ಅನ್ವಯ. ಐಸಿಎಸ್‌ಸಿ, ಸಿಬಿಎಸ್‌ಇ ಬೋರ್ಡ್ ಬಗ್ಗೆ ನಾವು ನಿರ್ಧಾರ ಮಾಡಲು ಆಗೊಲ್ಲ ಎಂದು ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

1ನೇ ತರಗತಿ ಸೇರುವ ಮಕ್ಕಳ ವಯೋಮಿತಿ ಸಡಿಲಿಕೆ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ಪೋಷಕರು ವಯೋಮಿತಿ ಗೊಂದಲದಲ್ಲಿ ಇದ್ದಾರೆ.

ಎರಡು ತಿಂಗಳು ರಿಯಾಯಿತಿ ಕೊಡಬಹುದು. ದೇಶದಲ್ಲಿ



ಈಗಾಗಲೇ 6 ವರ್ಷ ಇದೆ. ಈ ವರ್ಷ ಮಾತ್ರ ವಯಸ್ಸಿನ ಮಿತಿ ಸಡಿಲ ಮಾಡಲಾಗುವುದು. ಮುಂದಿನ ವರ್ಷದಿಂದ 1ನೇ ತರಗತಿಗೆ ಸೇರಲು 6 ವರ್ಷ ನಿಯಮ ಕಡ್ಡಾಯ ಎಂದು ತಿಳಿಸಿದರು.

ಎಸ್‌ಇಪಿ ಅವರಿಂದ ವರದಿ ಕೇಳಿದ್ವಿ. ಅವರು ಮೊದಲು 6 ವರ್ಷ ಅಂತ ಹೇಳಿದ್ರು. ಆಮೇಲೆ ನಮ್ಮ ಇಲಾಖೆ ಅವರ ಜೊತೆ ಮಾತಾಡಿದ ನಂತರ ಎಸ್‌ಇಪಿ ಸೂಚನೆ ಮೇಲೆ 5 ವರ್ಷ 5 ತಿಂಗಳು ಆಗಿದ್ದರೆ ದಾಖಲಾತಿ ಮಾಡಬೇಕು. ಸಮೀಕ್ಷೆಗೆ ತಂತ್ರಜ್ಞಾನ ಬಳಕೆ ಮಾಡಿ ಮತ್ತೆ ಮಾಡಲಿ ಎಂದರು.

ವಯೋಮಿತಿ ಸಡಿಲ ಮಾಡುವುದಕ್ಕೆ ಎಲ್ಲರೂ ಒತ್ತಡ ಹಾಕಿದ್ದರು.

ಮಕ್ಕಳನ್ನ ಮಿಷನ್ ರೀತಿ ಓದಿಸೋಕೆ ಪೋಷಕರು ಮುಂದಾಗಬಾರದು. ಮಕ್ಕಳಿಗೆ ಒತ್ತಡ ಹಾಕುವುದು ಸರಿಯಲ್ಲ. ಒತ್ತಡ ಇಲ್ಲದೆ ಮಕ್ಕಳು ಓದಬೇಕು ಎಂದು ಮಧು ಬಂಗಾರಪ್ಪ ಸಲಹೆ ನೀಡಿದರು.

### ಉಚಿತ ಯೋಗ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಡಾ. ಧನೇಶ ದೇಸಾಯಿ ಅಭಿಮತ

# ಯೋಗದಿಂದ ರೋಗ ಮುಕ್ತರಾಗಲು ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ದಿನಮಾನದಲ್ಲಿ ಬಹುಜನತೆಯ ಜೀವನ ಕ್ರಮ ವಿಭಿನ್ನ ರೀತಿಯಲ್ಲಿದೆ. ಬಹಳಷ್ಟು ಜನರು ಐಷಾರಾಮಿ ಜೀವನ ಕ್ರಮ ಮತ್ತು ಟಿ.ವಿ., ಮೊಬೈಲ್‌ಗಳ ಬಳಕೆಯಿಂದ ದೈಹಿಕ ಶ್ರಮ, ಮಾನಸಿಕ ವಿಶ್ರಾಂತಿಗಳನ್ನು ಮರೆತು ಯಾಂತ್ರಿಕ ಜೀವನ ನಡೆಸುತ್ತಿದ್ದಾರೆ. ಇದರಿಂದ ನಾನಾ ರೋಗ-ರುಜಿನ, ತಾಪತ್ರಯಗಳಿಗೆ ಬಲಿಯಾಗಿ ಸಂಕಷ್ಟಗಳ ಸಂಕೋಲೆಯಲ್ಲಿ ಜೀವನ ನಡೆಸುತ್ತಿದ್ದಾರೆ. ಈ ಸಂಕೋಲೆಯಿಂದ ಬಿಡುಗಡೆಯಾಗಬೇಕಾದರೆ ನಮ್ಮ ಜೀವನ ಕ್ರಮ ಬದಲಾಗಬೇಕು. ನಮ್ಮ ಆಚಾರ-ವಿಚಾರ, ಆಹಾರ-ವಿಹಾರ, ಉಡಿಗೆ-ತೊಡಿಗೆ, ನಡೆ-ನುಡಿ, ಅರಿವು-ಅನುಕರಣೆಗಳೆಲ್ಲವೂ ಯೋಗಮಯವಾಗಿರಬೇಕು ಎಂದು ಜ. ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ ಅಧ್ಯಕ್ಷರು



ಮತ್ತು ಖ್ಯಾತ ವೈದ್ಯರಾದ ಡಾ. ಧನೇಶ ದೇಸಾಯಿ ಹೇಳಿದರು.

ಜ. ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ, ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆ ಸಹಯೋಗದಲ್ಲಿ ಒಂದು ವಾರದ ಕಾಲ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಅನುಭವ ಮಂಟಪ (ಶ್ರೀಮಠದ ಆವರಣ)ದಲ್ಲಿ ನಡೆಸಿದ ಉಚಿತ ಯೋಗ ತರಬೇತಿ ಶಿಬಿರ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ನಿವೃತ್ತ ಉಪನ್ಯಾಸಕಿ ಶಕುಂತಲಾ ಸಿಂಧೂರ ಮಾತನಾಡಿ, ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಪಾಲ್ಗೊಂಡಿರುವುದು ಸಂತೋಷ. ಮಹಿಳೆ ಆರೋಗ್ಯದಿಂದಿದ್ದರೆ ಇಡೀ ಕುಟುಂಬ ಆರೋಗ್ಯದಿಂದಿರುವುದು. ಆರೋಗ್ಯ ಕುಟುಂಬಗಳಿಂದ ಆರೋಗ್ಯವಂತ ಸಮಾಜ ನಿರ್ಮಾಣಗೊಳ್ಳುವದೆಂದು

> ನಮಗೆ ಮೊದಲು ಮನಸ್ಸಿಗೆ ಬರುವ ರೋಗ ನಂತರ ದೇಹಕ್ಕೆ ವ್ಯಾಪಿಸುವದು. ದೇಹದ ರೋಗವನ್ನು ವೈದ್ಯರು ಗುಣಪಡಿಸಬಹುದು. ಆದರೆ ಮನೋವ್ಯಾಧಿಗೆ ಯೋಗ ಚಿಕಿತ್ಸೆ ಬೇಕು. ನೀವೆಲ್ಲರೂ ಈ ಶಿಬಿರದಲ್ಲಿ ಪಡೆದ ಯೋಗ ಜ್ಞಾನವನ್ನು ಹೆಚ್ಚಿಸಿಕೊಂಡು ನಿತ್ಯ ಯೋಗಾಭ್ಯಾಸ ಮಾಡಿ ನಿರೋಗಿಯಾಗಿ ಬಾಳಿರೆಂದು ಡಾ. ಧನೇಶ ದೇಸಾಯಿ ಶಿಬಿರಾರ್ಥಿಗಳಿಗೆ ಸೂಚಿಸಿದರು.

ಹೇಳಿದರು.

ಸಮಾರಂಭಕ್ಕೆ ದಯಮಾಡಿಸಿದ ಶೇಗುಣಸಿ ವಿರಕ್ತಮಠದ ಪೂಜ್ಯಶ್ರೀ ಮಹಾಂತಪ್ರಭು ಮಹಾಸ್ವಾಮಿಗಳು ಆಶೀರ್ವಚನ ದಯಪಾಲಿಸಿದರು.

ವೇದಿಕೆಯಲ್ಲಿ ಜ. ತೋಂಟ-ದಾರ್ಯ ಜಾತ್ರಾಮಹೋತ್ಸವ ಸಮಿತಿ ಉಪಾಧ್ಯಕ್ಷೆ ಶೈಲಾ ಕೋಡೆಕಲ್, ಕಾರ್ಯದರ್ಶಿ ಶಿವಪ್ಪ ಕತ್ತಿ, ಶಿಬಿರ ಶಿಕ್ಷಕ ಆಂಜನೇಶ ಮಾನೆ, ಶಿಕ್ಷಕಿ ಶೋಭಾ ಗುಗ್ಗರಿ, ಪತಂಜಲಿ ಜಿಲ್ಲಾ ಪ್ರಭಾರಿ ಗಿರಿಯಪ್ಪ ಮಡಿವಾಳರ, ಶಿಬಿರ ಮಾರ್ಗದರ್ಶಕ, ಯೋಗಾಚಾರ್ಯ ಕೆ.ಎಸ್. ಪಲ್ಲೇದ, ಹಿರಿಯರಾದ ಗೌರಕ್ಕ ಬಡಿಗಣ್ಣವರ ಉಪಸ್ಥಿತರಿದ್ದರು.

ಶಿಬಿರಾರ್ಥಿಗಳ ಪರವಾಗಿ ಬಸವರಾಜ ಹಿರೇಮಠ, ವಿದ್ಯಾಶ್ರೀ ಮಾವಿನಮರದ ಅನಿಸಿಕೆಗಳನ್ನು ತಿಳಿಸಿದರು. ಲತಾ ಮಾನೆ ಪ್ರಾರ್ಥನೆ ಹೇಳಿದರು. ಶೋಭಾ ಬೆಂಗಳೂರು ಸ್ವಾಗತ ಕೋರಿದರು. ಶ್ರೀಮಠದ ಭಕ್ತರಾದ ಶಿವಬಸಪ್ಪ ಯಂಡಿಗೇರಿ ಕಾರ್ಯಕ್ರಮ ನಿರೂಪಿಸಿದರು.ಸುಜಾತಾ ಅಂಬಕ್ಕಿ ವಂದಿಸಿದರು.

### ಖ್ಯಾತ ನಿವೃತ್ತ ಜಿಲ್ಲಾ ಆರೋಗ್ಯಾಧಿಕಾರಿ

# ಡಾ. ಈಶ್ವರಗೌಡ ಸಂಗನಗೌಡ ಪಾಟೀಲ ನಿಧನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೋಣ ಪಟ್ಟಣದ ನಿವೃತ್ತ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಈಶ್ವರಗೌಡ ಸಂಗನಗೌಡ ಪಾಟೀಲ (86) ಮಂಗಳವಾರ ವಯೋಸಹಜ ಕಾಯಿಲೆಯಿಂದ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.

ಮೂಲತಃ ರೋಣ ಪಟ್ಟಣದ ಪ್ರತಿಷ್ಠಿತ ಪಾಟೀಲ ಮನೆತನದವರಾಗಿದ್ದ ಡಾ. ಈಶ್ವರಗೌಡ ಎಸ್.ಪಾಟೀಲರು ರಾಯಚೂರ ಜಿಲ್ಲಾ ಆರೋಗ್ಯಾಧಿಕಾರಿಯಾಗಿ ಉತ್ತಮ ಸೇವೆ ಸಲ್ಲಿಸಿದ್ದು, ರಾಯಚೂರಿನಲ್ಲಿಯೇ ವಾಸವಾಗಿದ್ದರು.

ವಯೋ ಸಹಜ ಕಾಯಿಲೆಗೆ ಚಿಕಿತ್ಸೆ ಪಡೆಯಲು



ಬೆಂಗಳೂರು ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮಂಗಳವಾರ ನಿಧನರಾದರು.

ಮೃತರಿಗೆ ಇಬ್ಬರು ಪುತ್ರರು, ಇಬ್ಬರು ಪುತ್ರಿಯರಿದ್ದಾರೆ.

ಹಿರಿಯ ಸಹೋದರ ಬಾಗಲಕೋಟೆ ಮಾಜಿ ಸಂಸದ ಆರ್.ಎಸ್. ಪಾಟೀಲ, ಕಿರಿಯ ಸಹೋದರ ಕರ್ನಾಟಕ ರಾಜ್ಯ ನಿವೃತ್ತ ಮುಖ್ಯ ಕಾರ್ಯದರ್ಶಿ ಬಿ.ಎಸ್. ಪಾಟೀಲ, ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ, ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ ಇವರ ಸಹೋದರರಾಗಿದ್ದು, ಅಪಾರ ಬಂಧು ಬಳಗವಿದೆ. ಅಂತ್ಯಕ್ರಿಯೆಯು ಬುಧವಾರ ಮಧ್ಯಾಹ್ನ ರೋಣ ಪಟ್ಟಣದ ಜಕ್ಕಲಿ ರಸ್ತೆಯಲ್ಲಿರುವ ಪಾಟೀಲರ ತೋಟದಲ್ಲಿ ನೆರವೇರಿತು.

ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲೆಂದು ಅನೇಕ ಮಠಾಧೀಶರು, ಗಣ್ಯರು ಸಂತಾಪ ಸೂಚಿಸಿದ್ದಾರೆ.

# ಡಾ. ಅಂಬೇಡ್ಕರರು ಸಮಾಜ ಸುಧಾರಕರು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಅಬ್ಬಿಗೇರಿ ಗ್ರಾಮದ ಕಾಂಗ್ರೆಸ್ ಕಮಿಟಿ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು. ಮಾನವ ಬಂಧುತ್ವ ವೇದಿಕೆಯ ಸಂಚಾಲಕ ಶರಣಪ್ಪಗೌಡ ಮಾದಿನೂರ ಮಾತನಾಡಿ, ಅಂಬೇಡ್ಕರರು ಶಿಕ್ಷಣ ತಜ್ಞ, ನ್ಯಾಯ ಶಾಸ್ತ್ರಜ್ಞ, ಸಮಾಜ ಸುಧಾರಕರಾಗಿದ್ದು, ದೇಶಕ್ಕೆ ಅದ್ಭುತವಾದ ಸಂವಿಧಾನವನ್ನು ನೀಡಿದ ಸಂವಿಧಾನ ಶಿಲ್ಪಿ ಎಂದರು.

ಈ ಸಂದರ್ಭದಲ್ಲಿ ಬಸವರಾಜ ಪಲ್ಲೇದ, ಸುರೇಶ ಬಸವರಡ್ಡೇರ, ಎಂ.ಕೆ. ಅಂಗಡಿ, ಗುರಣ್ಣ ಅವರಡ್ಡಿ, ಲಕ್ಷ್ಮಣ ಹಿರೇಮನಿ, ಮಲ್ಲಣ್ಣ ಕಲ್ಲೇಶ್ಯಾಣಿ, ಮಲ್ಲಣ್ಣ ಬಸವರಡ್ಡೇರ, ಎಚ್.ಟಿ. ದ್ವಾಸಲ್, ಶಿವಪುತ್ರಪ್ಪ ಕೆಂಗಾರ, ಆನಂದ ಹಿರೇಮನಿ, ಬಸವರಾಜ ಕಮ್ಮಾರ, ರಾಮನಗೌಡ ಹಲಕುರ್ಕಿ, ಬಾಬು ಬನ್ನಿಕೊಪ್ಪ, ಮಲ್ಲು ಯಲ್ಲರೆಡ್ಡಿ, ರಾಮನಗೌಡ ಹಲಕುರ್ಕಿ, ಪ್ರಕಾಶ ಪಾಟೀಲ, ಸೋಮನಗೌಡ ವಡವಿ, ಭೀಮಣ್ಣ ಕಂಬಳಿ, ಬಸವರಾಜ ತಳಬಾಳ, ಕುಮಾರ ಭೀಮನಗೌಡ್ರ, ಜಗ್ಗಣ್ಣ ಅವರಡ್ಡಿ, ಅಶೋಕ ಹಳ್ಳಿ, ಮಲ್ಲಪ್ಪ ಕೆಂಗಾರ, ಗದಿಗೆಪ್ಪ ಕೆಂಗಾರ, ಸೋಮು ಶಿರೋಳ ಮುಂತಾದವರಿದ್ದರು.

ಅಬ್ಬಿಗೇರಿಯ ದುರ್ಗಾದೇವಿ ಟ್ರಸ್ಟ್ ಕಮಿಟಿಯ ಆಶ್ರಯದಲ್ಲಿ ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರ್ ಹಾಗೂ ಹಸಿರು ಕ್ರಾಂತಿಯ ಹರಿಕಾರ ಬಾಬು ಜಗಜೀವನರಾಮರ ಜಯಂತಿಯನ್ನು ಆಚರಿಸಲಾಯಿತು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲೋಹಿತರ ಕಾರ್ಯಕ್ರಮ ಉದ್ಘಾಟಿಸಿದರು. ಲಕ್ಷ್ಮಣ ಹಿರೇಮನಿ ಮತ್ತು ಶಿವಪುತ್ರಪ್ಪ ಕೆಂಗಾರ ಮಾತನಾಡಿದರು.

ಸಮಾರಂಭದಲ್ಲಿ ಬಸವರಾಜ ಕೆಂಗಾರ, ಶರಣಪ್ಪ ಐಹೊಳ್ಳಿ, ಶಶಿ ಹಿರೇಮನಿ, ಮಲ್ಲಪ್ಪ ಹಿರೇಮನಿ, ಹನುಮಪ್ಪ ದ್ವಾಸಲ್, ಚನ್ನಪ್ಪ ಗೌಡನಭಾವಿ, ಎಚ್.ಟಿ. ದ್ವಾಸಲ್, ಮಾರುತಿ ದ್ವಾಸಲ್ ಇನ್ನಿತರರಿದ್ದರು.

### ಶ್ರೀ ಹೇಮಗಿರಿ ಚನ್ನಬಸವೇಶ್ವರ ಶಿಲಾ ಮಠ ಉದ್ಘಾಟನಾ ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು


# ಶಿವಪೂಜೆ, ಶಿವಧ್ಯಾನದಿಂದ ಮಾನಸಿಕ ಶಾಂತಿ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಆಧುನಿಕ ಕಾಲದಲ್ಲಿ ಬೇಕಾದಷ್ಟು ಪ್ರಗತಿಯನ್ನು ಕಂಡರೂ ಮನಸ್ಸಿಗೆ ಶಾಂತಿ-ನೆಮ್ಮದಿ ಇಲ್ಲ. ಶಿವಪೂಜೆ, ಶಿವ ಧ್ಯಾನದಿಂದ ಮಾನಸಿಕ ಶಾಂತಿ ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಗುತ್ತಲ ಪಟ್ಟಣದ ಶ್ರೀ ಹೇಮಗಿರಿ ಚನ್ನಬಸವೇಶ್ವರ ಶಿಲಾ ಮಠ ಉದ್ಘಾಟನೆ ಹಾಗೂ ಕಳಸಾರೋಹಣ ಅಂಗವಾಗಿ ಜರುಗಿದ ಇಷ್ಟಲಿಂಗ ಮಹಾಪೂಜಾ ಮತ್ತು ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಭೌತಿಕವಾಗಿ ಬಹಳಷ್ಟು ಸಂಪತ್ತು ಸಂಪಾದಿಸಿದರೂ ಇರಬೇಕಾದ ಸಂತೃಪ್ತಿ, ಸಮಾಧಾನ ಇಲ್ಲ. ನಾಗರಿಕತೆಯ



ನಾಗಾಲೋಟದಲ್ಲಿ ಮನುಷ್ಯ ಸಿಲುಕಿ ತೊಳಲಾಡುತ್ತಿದ್ದಾನೆ. ಗುರು ಕೊಟ್ಟ ಇಷ್ಟಲಿಂಗ ಪೂಜೆಯಿಂದ ಅನಿಷ್ಟಗಳು ದೂರವಾಗಿ ಇಷ್ಟಾರ್ಥಗಳು ಪ್ರಾಪ್ತವಾಗುತ್ತವೆ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ಶಿವಪೂಜೆಯಿಂದ ಪೂರ್ವ ಜನ್ಮದ ಕರ್ಮಗಳು ಕೂಡ ನಾಶವಾಗುತ್ತವೆ. ಪ್ರತಿಯೊಬ್ಬರು ಶಿವನನ್ನು ಪೂಜಿಸಿ ತಮ್ಮ ಇಷ್ಟಾರ್ಥಗಳನ್ನು ಪಡೆದುಕೊಂಡಿದ್ದಾರೆ. ಬ್ರಹ್ಮ ವಿಷ್ಣು ಸಕಲ ದೇವಾನುದೇವತೆಗಳು ಸಹ ಶಿವನನ್ನು ಪೂಜಿಸಿ ಸತ್ಫಲಗಳನ್ನು ಪಡೆದಿದ್ದಾರೆ. ಜಗತ್ತನ್ನು ವ್ಯಾಪಿಸಿರುವ ಭಗವಂತ ವೀರಶೈವರ ಕರದಲ್ಲಿ ಕರದಿಷ್ಟ ಲಿಂಗವಾಗಿ ಪೂಜೆಗೊಳ್ಳುತ್ತಿದ್ದಾನೆ

> ದೇಹವೇ ದೇವಾಲಯ, ಇಷ್ಟಲಿಂಗವೇ ಆರಾಧ್ಯ ದೈವವೆಂದು ಪೂಜಿಸುವ ಸಮುದಾಯ ಯಾವುದಾದರೂ ಇದ್ದರೆ ಅದು ವೀರಶೈವ ಲಿಂಗಾಯತ ಸಮಾಜ. ಅಂಗದ ಮೇಲೆ ಲಿಂಗ ಇದ್ದವರೆಲ್ಲರೂ ವೀರಶೈವ-ಲಿಂಗಾಯತರು. ಹೆಸರಿಗೆ ಲಿಂಗಾಯಿತರಾದರೆ ಸಾಲದು, ಆಚರಣೆಯೊಂದಿಗೆ ವೀರಶೈವ-ಲಿಂಗಾಯಿತ ಆಗಬೇಕೆಂಬುದು ಆಚಾರ್ಯರ ಮತ್ತು ಶರಣರ ಸದಾಶಯ ಆಗಿದೆ. ವೀರಶೈವ ತತ್ವ ಸಿದ್ಧಾಂತಗಳಿಗೆ ತಲೆಬಾಗಿ ಬರುವರೆಲ್ಲರೂ ಇಷ್ಟ ಲಿಂಗವನ್ನು ಪೂಜಿಸಬಹುದೆಂದು ನಿರೂಪಿಸಿದ್ದಾರೆ. ಗುತ್ತಲದ ಹೇಮಗಿರಿ ಮಠ ಭವ್ಯ ಶಿಲಾ ಮಠವಾಗಿ ನಿರ್ಮಾಣಗೊಂಡಿದ್ದು ತಮಗೆ ಅತ್ಯಂತ ಸಂತೋಷವನ್ನುಂಟುಮಾಡಿದೆ ಎಂದು ರಂಭಾಪುರಿ ಶ್ರೀಗಳು ನುಡಿದರು.

ಎಂದರು.

ಹಂಪಸಾಗರ ನವಲಿ ಹಿರೇಮಠದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿದರು. ಅಂಗೂರ್ ಹಿರೇಮಠದ ಶಿವಯೋಗೀಶ್ವರ ಶ್ರೀಗಳು, ಗುತ್ತಲ ಅಗಡಿಯ ಗುರುಸಿದ್ಧ ಶ್ರೀಗಳು ಉಪಸ್ಥಿತರಿದ್ದರು. ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು. ಕೋವಳ್ಳಿ ಮಠದ ಕೊಟ್ರಯ್ಯ ಚನ್ನವೀರಪ್ಪ ಕುರುವತ್ತಿ, ಅಂಗಡಿ ಕೊಟ್ರೇಶಪ್ಪ ಹಾಗೂ ಹೇಮಗಿರಿ ಮಠದ ಎಲ್ಲ ವಂಶಸ್ಥರು ಪಾಲ್ಗೊಂಡಿದ್ದರು.

# ಉಚಿತ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರು, ಅಂಧತ್ವ ನಿವಾರಣಾ ವಿಭಾಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಗದಗ ಇವರ ಸಹಯೋಗದೊಂದಿಗೆ ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯಲ್ಲಿ (ಜಿಲ್ಲಾ ಸ್ಟೇಡಿಯಂ ಹತ್ತಿರ) ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಏರ್ಪಡಿಸಲಾಗಿದೆ.

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ಕೈಗೊಳ್ಳುವ 202ನೇ ಉಚಿತ ನೇತ್ರ ಚಿಕಿತ್ಸಾ ಶಿಬಿರವನ್ನು ಶ್ರೀ ತೋಂಟ-ದಾರ್ಯ ಜಾತ್ರಾಮಹೋತ್ಸವ ಸಮಿತಿ-2025ರ ಪ್ರಾಯೋಜಕತ್ವದಲ್ಲಿ ರೋಟರಿ ಉಚಿತ ಕಣ್ಣಿನ ಆಸ್ಪತ್ರೆಯಲ್ಲಿ ಎಪ್ರಿಲ್ 19ರಂದು ಸಾಯಂಕಾಲ 5 ಗಂಟೆಗೆ ತಪಾಸಣೆ ಹಾಗೂ ಎ.20ರಂದು ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯನ್ನು ಕೈಗೊಳ್ಳಲಾಗುವುದು. ತಪಾಸಣೆಗೆ ಬರುವ ರೋಗಿಗಳು ತಮ್ಮ ಆಧಾರ್ ಕಾರ್ಡಿನ ಝರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ತರಬೇಕು.

ಬ್ಲಡ್ ಪ್ರೆಶರ್ ಹಾಗೂ ಸಕ್ಕರೆ ಕಾಯಿಲೆ ಇದ್ದವರಿಗೆ ಅವುಗಳು ನಿಯಂತ್ರಣಕ್ಕೆ ಬರದ ಹೊರತು ಆಪರೇಶನ್ ಮಾಡಲಾಗುವುದಿಲ್ಲ. ರೋಗಿಗಳು ತಮ್ಮ ಹೆಸರನ್ನು ರೋಟರಿ ಐ ಕೇರ್ ಸೆಂಟರ್‌ನಲ್ಲಿ (ಸ್ಟೇಡಿಯಂ ಹತ್ತಿರ) ನೋಂದಾಯಿಸಬೇಕೆಂದು ಸಂಸ್ಥೆಯ ಅಧ್ಯಕ್ಷ ರೊ. ಇಂ. ಶ್ರೀಧರ ಎನ್.ಸುಲ್ತಾನಪೂರ, ಕಾರ್ಯದರ್ಶಿ ರೊ. ಇಂ. ಬಾಲಕೃಷ್ಣ ಕಾಮತ, ಐ.ಒ.ಎಲ್. ಚೇರಮನ್ ರೊ. ಡಾ.ಶೇಖರ ಡಿ.ಸಜ್ಜನರ ಹಾಗೂ ಶ್ರೀ ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ-2025ರ ಅಧ್ಯಕ್ಷ ಡಾ. ಧನೇಶ ದೇಸಾಯಿ ಸಾರ್ವಜನಿಕರಲ್ಲಿ ವಿನಂತಿಸಿಕೊಂಡಿದ್ದಾರೆ.

### ಶ್ರೀ ಹೇಮಗಿರಿ ನೂತನ ಶಿಲಾಮಂದಿರ ಉದ್ಘಾಟನಾ ಪೂರ್ವ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸಂಬಂಧಗಳು ಪುಸ್ತಕ ಇದ್ದಂತೆ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಮನುಷ್ಯನಿಗೆ ಒಳ್ಳೆಯ ಗುಣ, ಒಳ್ಳೆಯ ನಡತೆ ಮತ್ತು ಒಳ್ಳೆಯ ಸಂಸ್ಕಾರ ಇವುಗಳೇ ನಿಜವಾದ ಆಸ್ತಿಯೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ತಾಲೂಕಿನ ಗುತ್ತಲ ಪಟ್ಟಣದ ಶ್ರೀ ಹೇಮಗಿರಿ ನೂತನ ಶಿಲಾಮಂದಿರ ಉದ್ಘಾಟನಾ ಪೂರ್ವ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಎಲ್ಲಿಯ ತನಕ ನಂಬಿಕೆ-ಸ್ನೇಹ-ಪ್ರೀತಿ ಎಂಬ ಬೇರುಗಳು ಗಟ್ಟಿಯಾಗಿರುತ್ತವೆಯೋ ಅಲ್ಲಿಯ ತನಕ ಸಂಬಂಧವೆಂಬ ಮರ ಅಲುಗಾಡದೇ ಗಟ್ಟಿಯಾಗಿರುತ್ತದೆ. ತಂದೆಯಿಂದ ಪಡೆದ ಗತ್ತು, ತಾಯಿಯಿಂದ ಪಡೆದ ತುತ್ತು, ಶಿಕ್ಷಕರಿಂದ ಕಲಿತ ಶಿಸ್ತು ಎಂದಿಗೂ ಮರೆಯಲಾಗದು. ಸಂಬಂಧಗಳು ಪುಸ್ತಕ ಇದ್ದಂತೆ. ಬರೆಯಲು ವರುಷಗಳೇ ಬೇಕು. ಆದರೆ



ನಾಶ ಮಾಡಲು ಒಂದು ಕ್ಷಣ ಸಾಕು. ಏನು ಹೇಳುತ್ತೇವೆ ಎನ್ನುವುದಕ್ಕಿಂತಲೂ ಹೇಗೆ ಹೇಳುತ್ತೇವೆ ಎಂಬುದು ಮುಖ್ಯ.

ಜೀವನದಲ್ಲಿ ಅಲ್ಲದವರ ಸಂಗ ಮಾಡಿ ಅಡವಿ ಪಾಲಾಗುವುದಕ್ಕಿಂತ ಬಲ್ಲವರ ಸಂಗ ಮಾಡಿ ಬೆಲ್ಲದಂತೆ ಬಾಳುವುದು ಶ್ರೇಯಸ್ಕರವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ಬಡವನಿಗೆ ನೆಮ್ಮದಿ ಇರುತ್ತದೆ. ಆದರೆ ಹಣ ಇರುವುದಿಲ್ಲ. ಶ್ರೀಮಂತನಿಗೆ ಹಣ ಇರುತ್ತದೆ. ಆದರೆ ನೆಮ್ಮದಿ ಇರುವುದಿಲ್ಲ. ಹಣ, ನೆಮ್ಮದಿ ಇದ್ದವರಿಗೆ ಒಳ್ಳೆಯ ಗುಣ ಇರುವುದಿಲ್ಲ. ಹಣ, ಗುಣ, ನೆಮ್ಮದಿ ಇದ್ದವರು ಭೂಮಿಯ ಮೇಲೆ ಬಹಳ

ನೇತೃತ್ವ ವಹಿಸಿದ ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮಾನವನ ಉಸಿರಾಟಕ್ಕೆ ಗಾಳಿ ಎಷ್ಟು ಮುಖ್ಯವೋ, ಜೀವನದ ಉಜ್ವಲ ಭವಿಷ್ಯಕ್ಕೆ ಗುರು ಮಾರ್ಗದರ್ಶನ ಅವಶ್ಯಕವಾಗಿದೆ. ಕಾಲ ಕಾಲಕ್ಕೆ ಮಹಾತ್ಮರು ಕೊಟ್ಟ ಅಮೂಲ್ಯ ಸಂದೇಶದ ನುಡಿಗಳು ಎಲ್ಲರಿಗೂ ದಾರಿದೀಪ. ಗುತ್ತಲದ ನೂತನ ಹೇಮಗಿರಿ ಶಿಲಾಮಠ ಉದ್ಘಾಟನೆಗೊಳ್ಳುತ್ತಿರುವುದು ನಮ್ಮೆಲ್ಲರ ಸೌಭಾಗ್ಯ ಎಂದರು.

ವರುಷ ಇರುವುದಿಲ್ಲ ಎಂಬ ಸತ್ಯ ಅರಿಯಬೇಕಾಗಿದೆ ಎಂದರು.

ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಸಮಾರಂಭವನ್ನು ಉದ್ಘಾಟಿಸಿ ಮನುಷ್ಯ ಧರ್ಮ ಮಾರ್ಗದಲ್ಲಿ ಮುನ್ನಡೆದಾಗ ಯಶಸ್ಸು ದೊರೆಯುತ್ತದೆ ಎಂದರು.

ಹಂಪಸಾಗರ ನವಲಿ ಹಿರೇಮಠದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸಿ ಮಾತನಾಡಿ, ಶುದ್ಧವಾದ ಬುದ್ಧಿ ಸಂಪತ್ತಿನ ಆಗರ. ಬದುಕಿ ಬಾಳುವ ಜನಾಂಗಕ್ಕೆ ಧರ್ಮದ ಅರಿವು ಮತ್ತು ಆಚರಣೆ ಬೇಕು. ಅರಿವಿನ ಆಚಾರ ಬದುಕಿನ ಉನ್ನತಿಗೆ ಅಡಿಪಾಯ. ಶ್ರೀ ಜಗದ್ಗುರು ರೇಣುಕಾಚಾರ್ಯರ ಮೌಲ್ಯಾಧಾರಿತ ವಿಚಾರ ಧಾರೆ ಸಕಲರ ಬಾಳಿನಲ್ಲಿ ಬೆಳಕು ತೋರುತ್ತವೆ ಎಂದರು.

ಅಂಗೂರ ಹಿರೇಮಠದ ಶಿವಯೋಗೀಶ್ವರ ಶಿವಾಚಾರ್ಯ ಸ್ವಾಮಿಗಳು, ಗುತ್ತಲ-ಅಗಡಿ ಕಲ್ಮಠದ ಗುರುಸಿದ್ಧಸ್ವಾಮಿಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

### ಆರ್ಟ್ ಗ್ಯಾಲರಿ ಒಳಾಂಗಣ, ಗೋಡೆಗಳಿಗೆ ಜಾನಪದ ಕಲೆಗಳಿಂದ ಶೃಂಗಾರ

# ಸಾಂಪ್ರದಾಯಿಕ ಕಲೆಯ ಸ್ಪರ್ಶ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಸರ್ಕಾರಿ ಚಿತ್ರಕಲಾ ಮಹಾವಿದ್ಯಾಲಯ ಧಾರವಾಡದ ಆರ್ಟ್ ಗ್ಯಾಲರಿಯ ಒಳಾವರಣದ ಕಂಪೌಂಡ್ ಹಾಗೂ ಕಟ್ಟಡದ ಗೋಡೆಗಳ ಮೇಲೆ ವಿದ್ಯಾರ್ಥಿಗಳೇ ರಚಿಸಿದ ಭಾರತೀಯ ಸಾಂಪ್ರದಾಯಿಕ ಕಲೆಗಳು ಹಾಗೂ ಜಾನಪದ ಚಿತ್ರಗಳಿಂದ ಕಂಗೊಳಿಸುತ್ತಿವೆ.

ಎಪ್ರಿಲ್ 15ರಂದು ಧಾರವಾಡದ ಸರಕಾರಿ ಚಿತ್ರಕಲಾ ಮಹಾ ವಿದ್ಯಾಲಯದಲ್ಲಿ ವಿಶ್ವ ಚಿತ್ರಕಲಾ ದಿನದ ಆಚರಣೆಯ ಪ್ರಯುಕ್ತ ಭಿತ್ತಿ ಚಿತ್ರಗಳನ್ನು ಲೋಕಾರ್ಪಣೆಗೊಸಲಾಯಿತು.

ಚಿತ್ರಕಲೆಯು ಭಾರತಿಯ ಸಂಸ್ಕೃತಿ, ಹೆಮ್ಮೆಯ ಪ್ರತೀಕವಾಗಿವೆ. ಕಲಾಕೃತಿಗಳು ನಮ್ಮ ಸಂಪ್ರದಾಯ, ಸಂಸ್ಕೃತಿ, ಪರಂಪರೆಯನ್ನು ಪ್ರತಿಬಿಂಬಿಸುತ್ತವೆ. ವಿಶೇಷವಾಗಿ ಭಾರತೀಯ ಸಾಂಪ್ರದಾಯಿಕ ಕಲೆಗಳಾದ ಕಿರುರೂಪ ಚಿತ್ರಗಳು,



ಭಿತ್ತಿ ಚಿತ್ರಗಳ, ಜನಪದ ಚಿತ್ರಗಳು, ಕಲಾ ಪ್ರಕಾರಗಳಾದ ಕಾಂಗ್ರಾ, ಬಸೋಲಿ, ಮೇವಾರ, ವಿಜಯನಗರ, ಅಮ್ಮಿನಭಾವಿ, ನವಲಗುಂದ, ರಾಗಮಾಲಾ, ರಾಜಸ್ಥಾನಿ, ಪಟ ಚಿತ್ರಗಳು, ಕಿನ್ನಾಳ, ಮೈಸೂರು, ಅಜಂತಾ, ಕೋಟಾ, ವಾರ್ಲಿ, ಮಧುಬನಿ, ಪಹಾಡಿ, ಬುಂದಿ, ಮುಂತಾದ ಕಲೆಗಳು ವಿದ್ಯಾರ್ಥಿಗಳ ಕುಂಚದಲ್ಲಿ ಅರಳಿವೆ.

ಸರಕಾರಿ ಪದವಿ ಮಹಾವಿದ್ಯಾಲಯಗಳ ಪ್ರಾಚಾರ್ಯರಾದ ಡಾ. ನಳಿನಿ ಬೆಂಗೇರಿ, ಡಾ. ಎಸ್. ಎಸ್. ಅಂಗಡಿ ಉದ್ಘಾಟಕರಾಗಿ ಭಾಗವಹಿಸಿದ್ದರು. ಭಿತ್ತಿ ಚಿತ್ರಗಳನ್ನು ರಚಿಸಲು ಸಹಾಯ ಮಾಡಿದ ಆರ್ಟ್ ಪಾಯಿಂಟ್‌ನ ಮಾಲೀಕರಾದ ವಿಠ್ಠಲ್ ಬಸಲಗುಂದಿ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಹಿರಿಯ ಉಪನ್ಯಾಸಕರಾದ ಎಸ್.ಕೆ. ಪತ್ತಾರ, ಸರಕಾರಿ ಚಿತ್ರಕಲಾ ಮಹಾವಿದ್ಯಾಲಯದ ಮುಖ್ಯಸ್ಥರಾದ ಡಾ. ಬಸವರಾಜ್ ಕುರಿ, ಹಿರಿಯ ಕಲಾವಿದ ಬಿ. ಮಾರುತಿ ಉಪಸ್ಥಿತರಿದ್ದರು.

# ಉತ್ತರ ಪ್ರದೇಶ ಪೊಲೀಸರಿಗೆ ದಂಡ ವಿಧಿಸಿದ ಸುಪ್ರೀಂ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಸಿವಿಲ್ ಸ್ವರೂಪದ ಆಸ್ತಿ ವಿವಾದದಲ್ಲಿ ಎಫ್‌ಐಆರ್ ದಾಖಲಿಸಿದ್ದಕ್ಕಾಗಿ ಸುಪ್ರೀಂ ಕೋರ್ಟ್ ಬುಧವಾರ ಇಬ್ಬರು ಉತ್ತರ ಪ್ರದೇಶದ ಪೊಲೀಸ್ ಅಧಿಕಾರಿಗಳಿಗೆ 50,000 ರೂ. ದಂಡ ವಿಧಿಸಿದೆ.

ಸಿವಿಲ್ ವಿವಾದಗಳಲ್ಲಿ ಎಫ್‌ಐಆರ್‌ಗಳ ನೋಂದಣಿಯನ್ನು ಪ್ರಶ್ನಿಸುವ ಅರ್ಜಿಗಳಿಂದ ಸುಪ್ರೀಂ ಕೋರ್ಟ್ ತುಂಬಿಹೋಗಿದೆ, ಈ ಪದ್ಧತಿಯು 'ಹಲವಾರು ತೀರ್ಪುಗಳ ಉಲ್ಲಂಘನೆಯಾಗಿದೆ' ಎಂದು ಪೀಠ ಹೇಳಿದೆ.

"ಸಿವಿಲ್ ತಪ್ಪುಗಳಿಗೆ ಕ್ರಿಮಿನಲ್ ಮೊಕದ್ದಮೆ ಹೂಡುವುದು ಸ್ವೀಕಾರಾರ್ಹವಲ್ಲ" ಎಂದು ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿ ಸಂಜಯ್ ಕುಮಾರ್ ಅವರನ್ನೊಳಗೊಂಡ ಪೀಠವು, ತಪ್ಪಿತಸ್ಥ ಪೊಲೀಸ್ ಅಧಿಕಾರಿಗಳಿಗೆ ವಿಧಿಸಲಾದ




ದಂಡವನ್ನು ಮನ್ನಾ ಮಾಡಲು ನಿರಾಕರಿಸಿತು.

ನ್ಯಾಯಪೀಠವು ರಾಜ್ಯ ಸರ್ಕಾರದ ವಕೀಲರಿಗೆ, "ನೀವು 50,000 ರೂ. ವೆಚ್ಚವನ್ನು ಪಾವತಿಸಿ ಮತ್ತು ಅದನ್ನು ಅಧಿಕಾರಿಗಳಿಂದ ವಸೂಲಿ ಮಾಡಿ" ಎಂದು ಹೇಳಿತು. ದಂಡವನ್ನು ಮನ್ನಾ ಮಾಡುವಂತೆ ವಕೀಲರು ಕೋರಿದ್ದರು.

ಸಿಜೆಐ ಪ್ರಕರಣದ ವಿಷ'೦ು'ು ಗ'ಳ'ನ'ು ದಾಖಲಿಸಿಕೊಂಡಿದ್ದು, ಈ ಪ್ರಕರಣದಲ್ಲಿ ಉತ್ತರ ಪ್ರದೇಶದ ಕಾನ್ಪುರದ ರಿಖಾಬ್ ಬಿರಾನಿ ಮತ್ತು ಸಾಧನಾ ಬಿರಾನಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಹೇಳಿದರು. ಇದೇ ರೀತಿಯ ಪ್ರಕರಣವನ್ನು ವಿಚಾರಣೆ ನಡೆಸುವಾಗ ಸಿಜೆಐ ಈ ಹಿಂದೆ, "ಉತ್ತರ ಪ್ರದೇಶದಲ್ಲಿ ಕಾನೂನಿನ ನಿಯಮ ಸಂಪೂರ್ಣ ಕುಸಿದಿದೆ. ಸಿವಿಲ್ ಪ್ರಕರಣವನ್ನು ಕ್ರಿಮಿನಲ್ ಪ್ರಕರಣವಾಗಿ ಪರಿವರ್ತಿಸುವುದು ಸ್ವೀಕಾರಾರ್ಹವಲ್ಲ" ಎಂದು ಹೇಳಿದ್ದರು. ನಂತರ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ನಿರ್ದಿಷ್ಟ ಪ್ರಕರಣದಲ್ಲಿ ಅಫಿಡವಿಟ್ ಸಲ್ಲಿಸಲು ನಿರ್ದೇಶಿಸಲಾಯಿತು.

ಪ್ರಸ್ತುತ ಪ್ರಕರಣದಲ್ಲಿ, ಸ್ಥಳೀಯ ಮ್ಯಾಜಿಸ್ಟೀರಿಯಲ್ ನ್ಯಾಯಾಲಯವು ಬಿರಾನಿ ಕುಟುಂಬದ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲು ನಿರ್ದೇಶನ ಕೋರಿ ಶಿಲ್ಪಿ ಗುಪ್ತಾ ಎಂಬುವವರು ಸಲ್ಲಿಸಿದ ಎರಡು ಪ್ರತ್ಯೇಕ ಅರ್ಜಿಗಳನ್ನು ಎರಡು ಬಾರಿ ತಿರಸ್ಕರಿಸಿದ್ದರೂ ಸಹ, ರಾಜ್ಯ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ ಎಂದು ಪೀಠ ಗಮನಿಸಿತು.

ಬಿರಾನಿ ಕುಟುಂಬದವರು ಕಾನ್ಪುರದಲ್ಲಿರುವ ತಮ್ಮ ಗೋದಾಮನ್ನು ಗುಪ್ತಾ ಅವರಿಗೆ 1.35 ಕೋಟಿ ರೂ.ಗಳ ಪರಿಗಣನೆಗೆ ಮೌಖಿಕವಾಗಿ ಮಾರಾಟ ಮಾಡಲು ಒಪ್ಪಂದ ಮಾಡಿಕೊಂಡಿದ್ದಾರೆ ಎಂದು ದಾಖಲಾಗಿದೆ.

ಗುಪ್ತಾ ಅವರು ಭಾಗಶಃ ಮಾರಾಟ ಪರಿಗಣನೆಗೆ ಮಾತ್ರ 19 ಲಕ್ಷ ರೂ.ಗಳನ್ನು ಪಾವತಿಸಿದ್ದರು ಮತ್ತು ಸೆಪ್ಟೆಂಬರ್ 15, 2020 ರೊಳಗೆ ಒಪ್ಪಿಕೊಂಡ 25 ಪ್ರತಿಶತ ಮುಂಗಡವನ್ನು ಬಿರಾನಿ ಕುಟುಂಬಕ್ಕೆ ಪಾವತಿಸಲು ಸಾಧ್ಯವಾಗಲಿಲ್ಲ.

ನಂತರ, ಬಿರಾನಿಗಳು ಆ ಆಸ್ತಿಯನ್ನು ಮೂರನೇ ವ್ಯಕ್ತಿಗೆ 90 ಲಕ್ಷ ರೂ. ಕಡಿಮೆ ಬೆಲೆಗೆ ಮಾರಾಟ ಮಾಡಿದರು. ಗುಪ್ತಾ ಪಾವತಿಸಿದ 19 ಲಕ್ಷ ರೂ.ಗಳನ್ನು ಮರುಪಾವತಿಸಲಿಲ್ಲ. ಗುಪ್ತಾ ಎರಡು ಬಾರಿ ಎಫ್‌ಐಆರ್ ದಾಖಲಿಸಲು ಕ್ರಿಮಿನಲ್ ನ್ಯಾಯಾಲಯವನ್ನು ಸಂಪರ್ಕಿಸಲು ವಿಫಲರಾದರು.

ವಿಷಯವು ನಾಗರಿಕ ಸ್ವರೂಪದ್ದಾಗಿರುವುದರಿಂದ ಕ್ರಿಮಿನಲ್ ತನಿಖೆಗೆ ಆದೇಶಿಸಲು ಸಾಧ್ಯವಿಲ್ಲ ಎಂದು ಸ್ಥಳೀಯ ನ್ಯಾಯಾಲಯವು ಅಭಿಪ್ರಾಯಪಟ್ಟಿತು. ಆದರೂ, ಸ್ಥಳೀಯ ಪೊಲೀಸರು ವಂಚನೆ, ಕ್ರಿಮಿನಲ್ ಬೆದರಿಕೆ ಸೇರಿದಂತೆ ಅಪರಾಧಗಳಿಗಾಗಿ ಬಿರಾನಿಗಳ ವಿರುದ್ಧ ಎಫ್‌ಐಆರ್ ದಾಖಲಿಸಿದರು, ನಂತರ ನ್ಯಾಯಾಲಯವು ಅವರಿಗೆ ಸಮನ್ಸ್ ನೀಡಿತು.

ಎಫ್‌ಐಆರ್ ರದ್ದುಗೊಳಿಸಲು ನಿರಾಕರಿಸಿದ ಅಲಹಾಬಾದ್ ಹೈಕೋರ್ಟ್, ವಿಚಾರಣೆಯನ್ನು ಎದುರಿಸಲು ಹೇಳಿತು. ನಂತರ, ಆದೇಶವನ್ನು ಉನ್ನತ ನ್ಯಾಯಾಲಯದಲ್ಲಿ ಪ್ರಶ್ನಿಸಲಾಯಿತು.

### ವಕ್ಫ್ ಕಾಯ್ದೆ ತಿದ್ದುಪಡಿ ಪ್ರಶ್ನಿಸಿದ ಅರ್ಜಿಗಳ ವಿಚಾರಣೆ ವೇಳೆ ಸುಪ್ರೀಂ ಕೋರ್ಟ್ ಪ್ರಶ್ನೆ

# ಹಿಂದೂ ಧಾರ್ಮಿಕ ಟ್ರಸ್ಟ್ ಗಳಲ್ಲಿ ಮುಸ್ಲಿಮರಿಗೂ ಅವಕಾಶ ನೀಡುತ್ತೀರಾ..?

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ವಕ್ಫ್ (ತಿದ್ದುಪಡಿ) ಕಾಯ್ದೆ-2025ರ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಗಳ ವಿಚಾರಣೆಯ ಸಂದರ್ಭದಲ್ಲಿ, "ಹಿಂದೂ ಧಾರ್ಮಿಕ ಟ್ರಸ್ಟ್‌ಗಳಲ್ಲಿ ಮುಸ್ಲಿಮರಿಗೂ ಅವಕಾಶ ನೀಡುತ್ತೀರಾ?" ಎಂದು ಸುಪ್ರೀಂ ಕೋರ್ಟ್ ಬುಧವಾರ (ಏ.16) ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದೆ ಎಂದು ವರದಿಗಳು ಹೇಳಿವೆ.

ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಮತ್ತು ಕೆ.ವಿ ವಿಶ್ವನಾಥನ್ ಅವರಿದ್ದ ಪೀಠವು, 'ಬಳಕೆದಾರರಿಂದ ವಕ್ಫ್' (Waqf by User) ಅನ್ನು ನಿರಾಕರಿಸಲು ಹೇಗೆ ಸಾಧ್ಯ? ಏಕೆಂದರೆ, ಅನೇಕರು ವಕ್ಫ್ ಆಸ್ತಿಗಳನ್ನು ನೋಂದಾಯಿಸಲು ಅಗತ್ಯವಾದ ದಾಖಲೆಗಳನ್ನು ಹೊಂದಿರುವುದಿಲ್ಲ ಎಂದು ಕೇಂದ್ರದ ಪರವಾಗಿ ಹಾಜರಿದ್ದ ಸಾಲಿಸಿಟರ್ ಜನರಲ್ ತುಷಾರ್



ಮೆಹ್ತಾ ಅವರನ್ನು ಪ್ರಶ್ನಿಸಿದೆ ಎಂದು ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ತಿಳಿಸಿದೆ.

'ಬಳಕೆದಾರರಿಂದ ವಕ್ಫ್' (Waqf By User) ಎಂದರೆ, ಆಸ್ತಿ ಮಾಲೀಕರು ತಮ್ಮ ಆಸ್ತಿಯನ್ನು ವಕ್ಫ್ ಮಾಡಿರುವ ಬಗ್ಗೆ ಔಪಚಾರಿಕ, ಲಿಖಿತ ದಾಖಲೆಗಳು ಇಲ್ಲದಿದ್ದರೂ ಕೂಡ, ಯಾವುದೇ ಅಡೆತಡೆಯಿಲ್ಲದೆ ದೀರ್ಘ ಸಮಯದಿಂದ ಧಾರ್ಮಿಕ, ಸಾಮುದಾಯಿಕ ಉದ್ದೇಶಗಳಿಗೆ ಬಳಸುತ್ತಿರುವ ಆಧಾರದ ಮೇಲೆ ಆಸ್ತಿಯನ್ನು ಧಾರ್ಮಿಕ ಅಥವಾ ದತ್ತಿ ದತ್ತಿ (ವಕ್ಫ್) ಎಂದು ಗುರುತಿಸಿಕೊಂಡು ಬರಲಾಗುತ್ತಿದೆ.

"ನೀವು ಇಂತಹ ವಕ್ಫ್ ಆಸ್ತಿಗಳನ್ನು ಬಳಕೆದಾರರಿಂದ ಹೇಗೆ ನೋಂದಾಯಿಸುತ್ತೀರಿ? ಅವರ ಬಳಿ ಯಾವ ದಾಖಲೆಗಳಿವೆ? ಹೌದು, ಕೆಲವು ದುರುಪಯೋಗಳು ನಡೆಯುತ್ತಿವೆ. ಆದರೆ, ನಿಜವಾದವುಗಳೂ ಇವೆ. ನಾನು ಖಾಸಗಿ ಮಂಡಳಿಯ ತೀರ್ಪುಗಳನ್ನು ಕೂಡ ನೋಡಿದ್ದೇನೆ. ಬಳಕೆದಾರರಿಂದ ವಕ್ಫ್ ಅನ್ನು ಗುರುತಿಸಲಾಗಿದೆ. ನೀವು ಅದನ್ನು ರದ್ದುಗೊಳಿಸಿದರೆ ಸಮಸ್ಯೆಯಾಗುತ್ತದೆ. ಶಾಸಕಾಂಗವು ಆದೇಶ ಅಥವಾ ತೀರ್ಪನ್ನು ಅನೂರ್ಜಿತವೆಂದು ಘೋಷಿಸಲು ಸಾಧ್ಯವಿಲ್ಲ. ನೀವು ಆಧಾರವನ್ನು ಮಾತ್ರ ತೆಗೆದುಕೊಳ್ಳಬಹುದು" ಎಂದು ಪೀಠ ಹೇಳಿದೆ.

ಈ ವೇಳೆ, ವಕ್ಫ್ ಕಾಯ್ದೆಯಿಂದ ನಿಯಂತ್ರಿಸಲ್ಪಡಲು ಇಷ್ಟಪಡದ ಮುಸ್ಲಿಮರ ದೊಡ್ಡ ವರ್ಗವಿದೆ ಎಂದು ತುಷಾರ್ ಮೆಹ್ತಾ ನ್ಯಾಯಾಲಯಕ್ಕೆ ತಿಳಿಸಿದ್ದಾರೆ.

ಇದಕ್ಕೆ ಪ್ರತಿಕ್ರಿಯೆಯಾಗಿ ತುಷಾರ್ ಮೆಹ್ತಾ ಅವರಿಗೆ ಮರು ಪ್ರಶ್ನೆ ಹಾಕಿದ ಪೀಠ, "ಇನ್ನು ಮುಂದೆ ಮುಸ್ಲಿಮರು ಹಿಂದೂ ದತ್ತಿ ಮಂಡಳಿಗಳ ಭಾಗವಾಗಲು ಅವಕಾಶ ನೀಡುತ್ತೀರಿ ಎಂದು ನೀವು ಹೇಳುತ್ತಿದ್ದೀರಾ? ಅದನ್ನು ಬಹಿರಂಗವಾಗಿ ಹೇಳಿ" ಎಂದಿದೆ.

ಸಂಸತ್ತಿನ ಉಭಯ ಸದನಗಳಲ್ಲಿ ವಕ್ಫ್ (ತಿದ್ದುಪಡಿ) ಮಸೂದೆಯನ್ನು ಅಂಗೀಕರಿಸುವ ಮೊದಲು ಜಂಟಿ ಸಂಸದೀಯ ಸಮಿತಿಯು (ಜೆಪಿಸಿ) 38 ಸಭೆಗಳನ್ನು ನಡೆಸಿವೆ. ಬರೋಬ್ಬರಿ 98.2 ಲಕ್ಷ ಜ್ಞಾಪಕ ಪತ್ರಗಳನ್ನು ಪರಿಶೀಲಿಸಿದೆ ಎಂದು ತುಷಾರ್ ಮೆಹ್ತಾ ನ್ಯಾಯಾಲಯಕ್ಕೆ ತಿಳಿಸಿದ್ದಾರೆ.

ಈ ವೇಳೆ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಮತ್ತು ಕೆ.ವಿ ವಿಶ್ವನಾಥನ್ ಅವರ ಪೀಠವು ಎರಡು ಆಯಾಮದ ಪ್ರಶ್ನೆಗಳನ್ನು ಉಭಯ ಪಕ್ಷಗಳ ಮುಂದಿಟ್ಟಿದೆ.

"ನಾವು ಅರ್ಜಿಗಳನ್ನು ಪರಿಗಣಿಸಬೇಕೆ ಅಥವಾ ಹೈಕೋರ್ಟ್‌ಗೆ ವರ್ಗಾಯಿಸಬೇಕೆ? ಎರಡನೆಯದಾಗಿ ನೀವು ನಿಜವಾಗಿಯೂ ಏನು ಆಗಬೇಕೆಂದು ಬಯಸುತ್ತಿದ್ದೀರಿ? ಏನೆಂದು ವಾದಿಸಲು ಯತ್ನಿಸುತ್ತಿದ್ದೀರಿ ಎಂಬುವುದನ್ನು ಸಂಕ್ಷಿಪ್ತವಾಗಿ ಸೂಚಿಸಿ?" ಎಂದು ಸಿಜೆಐ ಖನ್ನಾ ಕೇಳಿದ್ದಾರೆ.

# ಮಕ್ಕಳಿಗೆ ಸೃಜನಶೀಲತೆ ಕಾರ್ಯಕ್ರಮ





■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯಲ್ಲಿ ಪಿ.ಕೆ. ಇನೋವೆಟಿವ್ ಸಮ್ಮರ್ ಕ್ಯಾಂಪ್ ವತಿಯಿಂದ ಬೇಸಿಗೆ ರಜಾ ದಿನದಲ್ಲಿ ಮಕ್ಕಳಿಗೆ ಸೃಜನಶೀಲತೆ ಕಾರ್ಯಕ್ರಮಕ್ಕೆ ಬುಧವಾರ ಸಿಸಿಎನ್ ವಿದ್ಯಾಪ್ರಸಾರ ಸಂಸ್ಥೆಯ ಅಧ್ಯಕ್ಷ ಚಂದ್ರಕಾಂತ ನೂರಶೆಟ್ಟರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕ್ಯಾಂಪ್‌ನ ಅಧ್ಯಕ್ಷ ಪ್ರವೀಣಕುಮಾರ ಹಡಪದ, ಪ್ರಸ್ತುತ ಶಾಲೆಗಳಿಗೆ ರಜೆ ಇರುವುದರಿಂದ ಇಂತಹ ಸಂದರ್ಭದಲ್ಲಿ ಮಕ್ಕಳ ಬೆಳವಣಿಗೆಗೆ ಗತ್ಯವಿರುವ ಸೃಜನಶೀಲತೆ, ನಿರೂಪಣೆ, ರಂಗನಾಟಕ, ಚಿತ್ರಕಲೆ ಮತ್ತು ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವಂತಹ ಕಾರ್ಯಕ್ರಮಗಳನ್ನು ನುರಿತ ತಜ್ಞರಿಂದ ನೀಡಲು ಈ ಶಿಬಿರ ಹಮ್ಮಿಕೊಳ್ಳಲಾಗಿದೆ. ಶಿರಹಟ್ಟಿ-ಮುಂಡರಗಿ-ಲಕ್ಷ್ಮೇಶ್ವರ ತಾಲೂಕಾ ಕೇಂದ್ರಗಳಲ್ಲಿಯೂ ಸಹ ಶಿಬಿರ ಆಯೋಜಿಸಿದ್ದು, ಪೋಷಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಹೇಳಿದರು.

ಚಂದ್ರಕಾಂತ ನೂರಶೆಟ್ಟರ, ಶಿಕ್ಷಕಿ ವಿಜಯಲಕ್ಷ್ಮೀ ಮಾಲಸೂರೆ, ಕೆ.ಎ. ಬಳಿಗಾರ, ಅಶೋಕ ರಾಟಿಮನಿ, ಅನಸೂಯಾ ಡಂಬಳ, ರಾಜೇಶ್ವರಿ ಹಡಪದ, ಮಂಜುನಾಥ, ಅಂಜನಾ ಮುಂತಾದವರು ಉಪಸ್ಥಿತರಿದ್ದರು.




ಲಕ್ಷ್ಮೇಶ್ವರದ ಶ್ರೀ ಶಿವಶರಣ ಸಮಗಾರ ಹರಳಯ್ಯ ಸರ್ಕಲ್‌ನಲ್ಲಿ ಸಮಾಜದಿಂದ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತ್ಯುತ್ಸವ ಆಚರಿಸಲಾಯಿತು. ಅನಿಲ ಮುಳಗುಂದ, ಸಂತೋಷ ಸಾತಪುತೆ, ಫಕ್ಕಿರೇಶ ನಂದೆಣ್ಣವರ, ಟಾಕಪ್ಪ ಸಾತಪುತೆ, ಪ್ರಜ್ವಲ್ ಹಂಜಗಿ, ಹನಮಂತಪ್ಪ ನಂದೆಣ್ಣವರ, ಸುರೇಶ ನಂದೆಣ್ಣವರ, ವಿಜಯ ಕರಡಿ, ಚಂದ್ರು ಹಂಪಣ್ಣವರ, ಬಸವರಾಜ ಪುಟಾಣಿ ಸೇರಿ ಅನೇಕರಿದ್ದರು.

# ಗೌರವಾಂಜಲಿ ಸಭೆ ಇಂದು


■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಧಾರವಾಡ ಸೇವಾ ಕೇಂದ್ರದಲ್ಲಿ ಸೇವೆ ಸಲ್ಲಿಸುತ್ತಿದ್ದ ರಾಜಯೋಗಿನಿ ಬ್ರಹ್ಮಕುಮಾರಿ ಅಂಬುಜಾಕ್ಷಿ ಅಕ್ಕನವರು ಅಗಲಿರುವ ನಿಮಿತ್ತ ಅಗಲಿದ ಆತ್ಮನಿಗೆ ಈಶ್ವರೀಯ ಗೌರವಾಂಜಲಿ ಸಭೆಯನ್ನು ಎಪ್ರಿಲ್ 17ರಂದು ಬೆಳಿಗ್ಗೆ 11 ಗಂಟೆಗೆ ಸಿದ್ಧರಾಮೇಶ್ವರ ನಗರದ ಬ್ರಹ್ಮಕುಮಾರಿ ಆಶ್ರಮದಲ್ಲಿ ಏರ್ಪಡಿಸಲಾಗಿದೆ.

ಈ ಹಿಂದೆ ಇವರು ಗದಗ, ಕುಂದಾಪುರ, ಮಂಗಳೂರು,



ಬಸ್ರೂರು, ತಡಕೋಡ, ರೋಣ ಸೇವಾ ಕೇಂದ್ರಗಳಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿದ್ದರು.



ಒಮಾನ್ ದೇಶದ ಪ್ರವಾಸದಲ್ಲಿರುವ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿಯವರು ಒಮಾನ್ ಚೇಂಬರ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರೀ ಕಚೇರಿಯಲ್ಲಿ ಅಧ್ಯಕ್ಷ ಶೈಖ್ ಫೈಝುಲ್ ಅಬ್ದುಲ್ಲ ಅಲ್ ರವಾಸ್‌ರೊಂದಿಗೆ ಮಾತುಕತೆ ನಡೆಸಿದರು. ಹಿರಿಯ ಆರ್ಥಿಕ ತಜ್ಞ ಎನ್. ರಮಾನಂದ ಪ್ರಭು, ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಒಮಾನ್ ಘಟಕದ ಅಧ್ಯಕ್ಷ ಅಬೂಬಕರ್ ರೋಯಲ್ ಬೊಳ್ಳರ್, ಸಭಾಪತಿಗಳ ಆಪ್ತ ಕಾರ್ಯದರ್ಶಿ ಡಾ. ವಿಶ್ವನಾಥ್ ಮುಂತಾದವರು ಜೊತೆಗಿದ್ದರು.

## ಉಚಿತ ತರಬೇತಿಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

SBI-ASFDgï¸Én (ಗಿಟ್‌ಸರ್ಡ್) (ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ಹುಲಕೋಟಿ-ಗದಗ) ಮತ್ತು ಅಗ್ರಿಕಲ್ಚರಲ್ ಸೈನ್ಸ್ ಫೌಂಡೇಶನ್ ಹುಲಕೋಟಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಉಚಿತ ಊಟ- ವಸತಿಯೊದಿಗೆ ಹೈನುಗಾರಿಕೆ ಮತ್ತು ಎರೆಹುಳ ಗೊಬ್ಬರ ತಯಾರಿಕೆ ತರಬೇತಿ, ಕುರಿ ಸಾಕಾಣಿಕೆ, ಸಿ.ಸಿ ಟಿವಿ ರಿಪೇರಿ, ಮೊಬೈಲ್ ರಿಪೇರಿ, ಮಹಿಳಾ ಹೊಲಿಗೆ ತರಬೇತಿಗಳನ್ನು ಎಪ್ರಿಲ್ ಮತ್ತು ಮೇ ತಿಂಗಳಲ್ಲಿ ಆರಂಭಿಸಲಿದೆ. 19ರಿಂದ 44 ವರ್ಷ ವಯಸ್ಸಿನೊಳಗಿನ ಆಸಕ್ತರು, ನಿರುದ್ಯೋಗಿಗಳು, ಯುವಕ/ಯುವತಿಯರು, ಪುರುಷರು, ಮಹಿಳೆಯರು, ಸ್ವ-ಸಹಾಯ ಗುಂಪಿನ ಗ್ರಾಮೀಣ ಭಾಗದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ. ಈ ತರಬೇತಿಗಳು ಊಟ, ವಸತಿಯೊಂದಿಗೆ ಉಚಿತವಾಗಿರುತ್ತದೆ.

ಕೇಂದ್ರ ಸರಕಾರದಿಂದ ತರಬೇತಿಯ ಪ್ರಮಾಣಪತ್ರ ಕೊಡಲಾಗುವುದು.

ತರಬೇತಿ ಪಡೆದವರಿಗೆ ಬ್ಯಾಂಕ್ ಸಾಲ ಮಾಡಿಸಿಕೊಡಲಾಗುವುದು. ಆಸಕ್ತರು ಎಸ್.ಬಿ.ಆಯ್ ಆರ್‌ಸೆಟಿ ಹುಲಕೋಟಿ ಗದಗ ಸಂಸ್ಥೆಯಲ್ಲಿ ದೊರೆಯುವ ಅರ್ಜಿ ಫಾರಂನಲ್ಲಿ ತುಂಬಿ-ನಿರ್ದೇಶಕರು SBI-ASF ಆರ್‌ಸೆಟಿ ಸಂಸ್ಥೆ ಹುಲಕೋಟಿ - ಗದಗ, ಕೃಷಿ ವಿಜ್ಞಾನ ಕೇಂದ್ರ ಆವರಣ, ಹುಲಕೋಟಿ-ಗದಗ ಇವರಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ-8880169996, 9632287949 ಸಂಪರ್ಕಿಸಲು ಕೋರಲಾಗಿದೆ.

### ಸಂಕದಾಳ ಶ್ರೀ ಸದ್ಗುರು ಹಾಲಶಿವಯೋಗಿಗಳ ಜಾತ್ರಾ ಮಹೋತ್ಸವ ಅಂಗವಾಗಿ ಸಾಮೂಹಿಕ ವಿವಾಹ

## ಕಾಯಕದೊಂದಿಗೆ ಉತ್ತಮ ಜೀವನ ರೂಪಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಮೂಹಿಕ ವಿವಾಹ ಎಂದರೆ ಅದು ಕೇವಲ ಬಡ ಜನರ ಮದುವೆ ಕಾರ್ಯಕ್ರಮ ಎಂದು ಭಾವಿಸುವುದು ತಪ್ಪು. ಪವಿತ್ರವಾದ ಧಾರ್ಮಿಕ ಕ್ಷೇತ್ರ, ಕಾರ್ಯಕ್ರಮಗಳಲ್ಲಿ ಸಹಸ್ರಾರು ಭಕ್ತರ ಮತ್ತು ಮಠಾಧೀಶರ ಆಶೀರ್ವಾದದೊಂದಿಗೆ ಸಾಮೂಹಿಕ ವಿವಾಹ ಬಂಧನಕ್ಕೊಳಗಾಗುವ ಭಾಗ್ಯ ಜೀವನದ ಸಾರ್ಥಕತೆಯ ಕ್ಷಣವಾಗಿದೆ ಎಂದು ಮೈಸೂರು/ಬನ್ನಿಕೊಪ್ಪ ಜಪದಕಟ್ಟಿಮಠದ ಡಾ. ಸುಜ್ಞಾನದೇವ ಶಿವಾಚಾರ್ಯರು ಹೇಳಿದರು.

ಅವರು ಬುಧವಾರ ತಾಲೂಕಿನ ಸುಕ್ಷೇತ್ರ ಸಂಕದಾಳ ಶ್ರೀ ಸದ್ಗುರು ಶಿವಯೋಗಿ ಹಾಲಶಿವಯೋಗಿಗಳ ಜಾತ್ರಾ ಮಹೋತ್ಸವ ಅಂಗವಾಗಿ ನಡೆದ ಸಾಮೂಹಿಕ ವಿವಾಹ ಮಹೋತ್ಸವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ವಿವಾಹ ಬಂಧನವೆಂದರೆ ಎರಡು ಮನಸ್ಸು, ಜೀವಗಳು ಒಂದಾಗಿ ಪರಸ್ಪರರು ಹಾಲು-ಜೇನಿನಂತೆ ಅನ್ಯೋನ್ಯತೆಯಿಂದ



ಜೀವನ ಸಾಗಿಸುವ ಪವಿತ್ರ ಬಂಧವಾಗಿದೆ. ದಾಂಪತ್ಯ ಜೀವನಕ್ಕೆ ಕಾಲಿಡುತ್ತಿರುವ ದಂಪತಿಗಳು ಪರಸ್ಪರ ಪ್ರೀತಿ, ವಿಶ್ವಾಸದಿಂದ ತಂದೆ-ತಾಯಿ, ಅತ್ತೆ-ಮಾವ, ಗುರು-ಹಿರಿಯರಲ್ಲಿ ವಿಧೇಯತೆ, ತಾಳ್ಮೆಯಿಂದ ಆದರ್ಶಮಯ ಜೀವನಕ್ಕೆ ಅಣಿಯಾಗಬೇಕು. ದುಶ್ಚಟಗಳಿಂದ ದೂರವಿದ್ದು ಕಾಯಕದೊಂದಿಗೆ ಉತ್ತಮ ಜೀವನ ರೂಪಿಸಿಕೊಳ್ಳಿ ಎಂದು ನವದಂಪತಿಗಳಿಗೆ ಸಲಹೆ ನೀಡಿದರು.

ಗಂಜಿಗಟ್ಟಿ ಚರಮೂರ್ತೇಶ್ವರ ಮಠದ ಡಾ. ಶಿವಲಿಂಗೇಶ್ವರ ಶಿವಾಚಾರ್ಯರು ಆಶೀರ್ವಚನ ನೀಡಿ, ಸಾಮೂಹಿಕ ವಿವಾಹಗಳು ದುಂದುವೆಚ್ಚಕ್ಕೆ ಕಡಿವಾಣ ಹಾಕಿ ಜಾತ್ಯಾತೀತ ಮನೋಭಾವ ಬೆಳೆಸುವಲ್ಲಿ ಪ್ರಮುಖ ಪಾತ್ರವಹಿಸುತ್ತಿವೆ. ಈ ನಿಟ್ಟಿನಲ್ಲಿ ಯುವ ಸಂಘಟನೆಗಳು, ದೇವಸ್ಥಾನ ಸಮಿತಿಗಳು ಸಂದರ್ಭೋಚಿತವಾಗಿ ಇಂತಹ ಕಲ್ಯಾಣ ಕಾರ್ಯಗಳನ್ನು ಹಮ್ಮಿಕೊಳ್ಳುವುದರಿಂದ ಬಡ ಕುಟುಂಬಗಳಿಗೆ ಆಸರೆಯಾಗುತ್ತದೆ. ಸಂಸಾರದ ಗುಟ್ಟು ಬಿಟ್ಟು ಕೊಡದೇ ಪ್ರೀತಿ ತುಂಬಿದ ಸಂಸಾರದ ಜೋಡೆತ್ತಿನ ಬಂಡಿ ಸಾರಾಗವಾಗಿ ಸಾಗಿದಾಗ ಮಾತ್ರ ಆ ಮನೆ ಸ್ವರ್ಗವಾಗುತ್ತದೆ. ಸಂಪ್ರದಾಯ, ಸಂಸ್ಕೃತಿ, ಧರ್ಮ ಮಾರ್ಗ ಮತ್ತು ಮಠ-ಮಾನ್ಯಗಳ ಸತ್ಸಂಗದೊಂದಿಗೆ ಸಾತ್ವಿಕ ಜೀವನಕ್ಕೆ ಒಗ್ಗಿಕೊಳ್ಳಬೇಕು ಎಂದರು.

ಲಕ್ಷ್ಮೇಶ್ವರ ಕರೇವಾಡಿಮಠದ ಶ್ರೀ ಮಳೇಮಲ್ಲಿಕಾರ್ಜುನ ಶಿವಾಚಾರ್ಯರು, ಕಳಸಾಪುರದ ಶ್ರೀ ಫಕ್ಕೀರೇಶ್ವರ ಶಿವಾಚಾರ್ಯರು, ವರವಿಯ ಶ್ರೀ ಮೌನೇಶ್ವರ ಸ್ವಾಮಿಗಳು, ಹುಲ್ಲೂರಿನ ಶ್ರೀ ಸಿದ್ದಯ್ಯಜ್ಜ ಸ್ವಾಮಿಗಳು, ಶ್ರೀಮಠದ ಶ್ರೀ ವಾಗೀಶ ಪಂಡಿತಾರಾಧ್ಯ ಹಾಲ ಶಿವಯೋಗಿಗಳು ಸೇರಿ ಹಾಲಸ್ವಾಮಿ ಶಾಖಾ ಮಠದ ಎಲ್ಲ ಪೂಜ್ಯರ ಉಪಸ್ಥಿತಿಯಲ್ಲಿ ಒಟ್ಟು 8 ಜೋಡಿಗಳು ವಿವಾಹ ಬಂಧನಕ್ಕೊಳಗಾದರು. ಶಾಸಕ ಡಾ. ಚಂದ್ರು ಲಮಾಣಿ, ಗ್ರಾಮದ ಗುರು-ಹಿರಿಯರು ಇದ್ದರು. ಸಂಜೆ ಕಡುಬಿನ ಕಾಳಗ, ಪಲ್ಲಕ್ಕಿ ಉತ್ಸವ, ಬಾಲ ಪ್ರತಿಭೆ ಮಹಾನ್ಯ ಪಾಟೀಲ ತಂಡದಿಂದ ಸಂಗೀತ ರಸಮಂಜರಿ ಕಾರ್ಯಕ್ರಮ ಜರುಗಿತು.

ಜಾತ್ರಾ ಮಹೋತ್ಸವದ ಅಂಗವಾಗಿ ಎ. 14ರಂದು ರಾತ್ರಿ ಪಾರಂಪರಿಕ ಮುಳ್ಳುಗದ್ದುಗೆ ಮಹೋತ್ಸವ ಅಪಾರ ಭಕ್ತ ಸಮೂಹದ ಸಮ್ಮುಖದಲ್ಲಿ ಜರುಗಿತು. ಎ.15ರಂದು ಕಲಕೇರಿಯ ಶ್ರೀ ಮುದುಕೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ನೇತೃತ್ವದಲ್ಲಿ ಶಿವದೀಕ್ಷಾ ಅಯ್ಯಾಚಾರ, ಸಂಜೆ ಮಹಾ ರಥೋತ್ಸವ, ಬಳಿಕ ಅಮೋಘ ಭರತ್ ತಂಡದಿಂದ ಮಲ್ಲಗಂಬ ಪ್ರದರ್ಶನ, ರಾತ್ರಿ ಶಿವಕೀರ್ತನೆ, ಸಾಹಿತ್ಯ ಸಂಸ್ಕೃತಿ ಕಾರ್ಯಕ್ರಮಗಳು ಜರುಗಿದವು.

### ಮುಡಾ ಪ್ರಕರಣದಲ್ಲಿ ಸಿಬಿಐ ತನಿಖೆ ಕೋರಿ ಅರ್ಜಿ

## ಸಿಎಂ ಸಿದ್ದರಾಮಯ್ಯ, ಅವರ ಪತ್ನಿಗೆ ಹೈಕೋರ್ಟ್ ನೋಟಿಸ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ನಿವೇಶನ ಹಂಚಿಕೆ ಪ್ರಕರಣದ ತನಿಖೆಯನ್ನು ಸಿಬಿಐಗೆ ವರ್ಗಾಯಿಸಲು ನಿರ್ದೇಶನ ನೀಡುವಂತೆ ಕೋರಿ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಮೇಲ್ಮನವಿಗೆ ಪ್ರತಿಕ್ರಿಯೆಯಾಗಿ ಕರ್ನಾಟಕ ಹೈಕೋರ್ಟ್, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಪತ್ನಿ ಮತ್ತು ಇತರರಿಗೆ ಬುಧವಾರ ನೋಟಿಸ್ ಜಾರಿ ಮಾಡಿದೆ.




ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ತಮ್ಮ ಪತ್ನಿ ಪಾರ್ವತಿ ಬಿ.ಎಂ ಅವರಿಗೆ 14 ನಿವೇಶನಗಳನ್ನು ಹಂಚಿಕೆ ಮಾಡುವಲ್ಲಿ ಅಕ್ರಮ ನಡೆದಿದೆ ಎಂಬ ಆರೋಪ ಸಿದ್ದರಾಮಯ್ಯ ಅವರ ಮೇಲಿದೆ. ಆರೋಪಿತ ಹಗರಣದ ಕುರಿತು ಲೋಕಾಯುಕ್ತ ಪೊಲೀಸರ ತನಿಖೆಯನ್ನು ಕೇಂದ್ರೀಯ ತನಿಖಾ ದಳಕ್ಕೆ ವರ್ಗಾಯಿಸಲು ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸಿದ ಏಕಸದಸ್ಯ ಪೀಠವು ಫೆಬ್ರವರಿ 7 ರಂದು ನೀಡಿದ ಆದೇಶವನ್ನು ಮೇಲ್ಮನವಿ ಪ್ರಶ್ನಿಸಿದೆ.

ಮುಖ್ಯ ನ್ಯಾಯಮೂರ್ತಿ ಎನ್ ವಿ ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೆ ವಿ ಅರವಿಂದ್ ಅವರನ್ನೊಳಗೊಂಡ ವಿಭಾಗೀಯ ಪೀಠವು ಏಪ್ರಿಲ್ 28 ರಂದು ನೋಟಿಸ್‌ಗೆ ಉತ್ತರಿಸುವಂತೆ ಆದೇಶಿಸಿತು. "ವಿಷಯ ವಿವಾದಕ್ಕೆ ಸಂಬಂಧಿಸಿದ ಮೇಲ್ಮನವಿಗಳನ್ನು ಏಪ್ರಿಲ್ 28 ರಂದು ಹಿಂತಿರುಗಿಸಬಹುದು. ಆ ದಿನದಂದು ಪಟ್ಟಿ ಮಾಡಲು ನಿರ್ಧರಿಸಲಾಗಿದೆ ಎಂದು ಹೇಳಲಾಗಿರುವುದರಿಂದ ಪ್ರತಿವಾದಿಗಳಿಗೆ ನೋಟಿಸ್ ಅನ್ನು ಹಿಂತಿರುಗಿಸಬಹುದು" ಎಂದು ಹೇಳಿದೆ. ಈ ವರ್ಷದ ಆರಂಭದಲ್ಲಿ ಮೂಲ ಅರ್ಜಿಯನ್ನು ವಜಾಗೊಳಿಸಲಾಯಿತು, ಲೋಕಾಯುಕ್ತದ ತನಿಖೆಯು ಯಾವುದೇ ಪಕ್ಷಪಾತ ಅಥವಾ ಕೊರತೆಯನ್ನು ಪ್ರದರ್ಶಿಸಿಲ್ಲ ಎಂದು ಏಕ ನ್ಯಾಯಾಧೀಶರು ತೀರ್ಮಾನಿಸಿದರು.

### ಕಲಬುರಗಿಯಲ್ಲಿ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯೆ

## ಯಾವ ಸಮುದಾಯದವರಿಗೂ ಅನ್ಯಾಯವಾಗಲು ಬಿಡುವುದಿಲ್ಲ

■ವಿಜಯಸಾಕ್ಷಿ ಸುದ್ದಿ, ಕಲಬುರ್ಗಿ

ಉದ್ಯೋಗ ಮೇಳಗಳನ್ನು ಏರ್ಪಡಿಸುವ ಮೂಲಕ ಯುವಜನತೆಗೆ ಉದ್ಯೋಗ ನೀಡುವುದು ನಮ್ಮ ಸರ್ಕಾರದ ಬದ್ಧತೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಅವರು ಬುಧವಾರ ಕಲ್ಬುರ್ಗಿ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದರು.

ವಿಭಾಗೀಯ ಮಟ್ಟದ ಉದ್ಯೋಗ ಮೇಳವನ್ನು ಕಲಬುರ್ಗಿಯಲ್ಲಿ ಏರ್ಪಡಿಸಲಾಗಿದೆ. ಮೈಸೂರು ಹಾಗೂ ಹುಬ್ಬಳ್ಳಿ, ಧಾರವಾಡದಲ್ಲಿಯೂ ಉದ್ಯೋಗ ಮೇಳವನ್ನು ಏರ್ಪಡಿಸಲಾಗುತ್ತಿದೆ. ಯುವನಿಧಿ ಯೋಜನೆಯನ್ನು ಜಾರಿ ಮಾಡಿದ್ದು, ನಿರುದ್ಯೋಗದ ಸಮಸ್ಯೆ ನಿವಾರಣೆಯ ಉದ್ದೇಶವಿದೆ. ಉದ್ಯೋಗವನ್ನು ಕೊಡುವ ಕೆಲಸವನ್ನು ಸರ್ಕಾರ ಮಾಡುತ್ತಿದೆ ಎಂದರು.



ಬಿಜೆಪಿಯವರು ರಾಜಕೀಯ ಉದ್ದೇಶದಿಂದ ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಚಾರ್ಜ್ ಶೀಟ್ ಹಾಕಿದ್ದಾರೆ. ನ್ಯಾಷನಲ್ ಹೆರಾಲ್ಡ್ ಪತ್ರಿಕೆ ನಿನ್ನೆ ಮೊನ್ನೆ ಪ್ರಾರಂಭವಾಗಿಲ್ಲ. ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿಯವರ ಆಸ್ತಿ ಮುಟ್ಟುಗೋಲು ಹಾಕುವುದು, ಚಾರ್ಜ್ ಶೀಟ್ ಹಾಕುವುದು ರಾಜಕೀಯ ದ್ವೇಷದಿಂದ ಮಾಡುತ್ತಿದ್ದಾರೆ.

**-ಸಿದ್ದರಾಮಯ್ಯ**, ಮುಖ್ಯಮಂತ್ರಿಗಳು.

ಜಾತಿ ಸಾಮಾಜಿಕ ಸಮೀಕ್ಷೆ

ಯಾವ ಸಮುದಾಯದವರಿಗೂ ಅನ್ಯಾಯವಾಗಲು ನಾವು ಬಿಡುವುದಿಲ್ಲ

ಚನ್ನಗಿರಿ ಶಾಸಕರು ಜಾತಿ ಗಣತಿ ಬಗ್ಗೆ ಲಿಂಗಾಯತ ಶಾಸಕರು ರಾಜೀನಾಮೆ ನೀಡುವಂತೆ ಹೇಳಿಕೆ ನೀಡಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಸಿದ್ದರಾಮಯ್ಯ, ಗುರುವಾರ ಸಾಮಾಜಿಕ, ಆರ್ಥಿಕ ಸಮೀಕ್ಷೆಯ ಕುರಿತು ಪ್ರತ್ಯೇಕವಾಗಿ ಸಚಿವ ಸಂಪುಟ ಸಭೆಯನ್ನು ಕರೆಯಲಾಗಿದ್ದು, ಈ ಬಗ್ಗೆ ಚರ್ಚೆ ಮಾಡಲಾಗುವುದು ಎಂದರು. ಶಾಸಕರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಎ.17ರಂದು ಅಂತಿಮವಾಗಿ ತೀರ್ಮಾನ ಮಾಡಲಾಗುವುದು ಎಂದರು. ಸಾಮಾಜಿಕ, ಆರ್ಥಿಕ ಸಮೀಕ್ಷೆ ಇದಾಗಿದ್ದು, ಯಾವ ಸಮುದಾಯದವರಿಗೂ ಅನ್ಯಾಯವಾಗಲು ನಾವು ಬಿಡುವುದಿಲ್ಲ ಎಂದು ಮುಖ್ಯಮಂತ್ರಿಗಳು ಸ್ಪಷ್ಟ ಪಡಿಸಿದರು.

**ಕಾನೂನು ಉಲ್ಲಂಘಿಸಿದರೆ ಬಲಿ ಹಾಕುತ್ತೇವೆ**

ದಾವಣಗೆರೆಯಲ್ಲಿ ಅನೈತಿಕ ಸಂಬಂಧ ಆರೋಪಿಸಿ ನಡುರಸ್ತೆಯಲ್ಲಿ ಮಹಿಳೆಯ ಮೇಲೆ ಹಲ್ಲೆ ನಡೆದಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಯಾರೇ ತಪ್ಪು ಮಾಡಿದರೂ ಕೂಡ, ಕಾನೂನು ಉಲ್ಲಂಘಿಸಿದರೆ ಯಾರು ಎಷ್ಟೇ ಪ್ರಬಲವಾಗಿದ್ದರೂ, ಬಲಿ ಹಾಕುತ್ತೇವೆ ಎಂದು ಮುಖ್ಯಮಂತ್ರಿಗಳು ಎಚ್ಚರಿಸಿದರು.

### ರಸ್ತೆ ಸಾರಿಗೆ ಸಂಸ್ಥೆಯ ಗದಗ ಘಟಕದ ಡಾ. ಅಂಬೇಡ್ಕರ ಜಯಂತಿ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

## ಡಾ. ಅಂಬೇಡ್ಕರರು ದೇಶದ ಚೇತನ

■ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ.ಆರ್. ಅಂಬೇಡ್ಕರರು ಸಂವಿಧಾನದ ಮೂಲಕ ಎಲ್ಲರ ಬದುಕಿಗೆ ಸರ್ವೋದಯದ ಬೆಳಕು ನೀಡಿ ನಮ್ಮೆಲ್ಲರಿಗೂ ಆದರ್ಶರಾಗಿದ್ದಾರೆ. ಅವರು ನಮಗೆ ಸದಾ ಚೇತನಶಕ್ತಿ. ಮಹಿಳೆಯರ ಸ್ವಾತಂತ್ರ್ಯಕ್ಕೆ ಭದ್ರವಾದ ಬುನಾದಿ ಹಾಕಿದ್ದಾರೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ರಸ್ತೆ ಸಾರಿಗೆ ಸಂಸ್ಥೆಯ ಗದಗ ಘಟಕದಲ್ಲಿ ನಡೆದ ಡಾ. ಬಿ.ಆರ್. ಅಂಬೇಡ್ಕರರ 134ನೇ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಾರ್ಮಿಕರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕಾರ್ಮಿಕ ಸಂಘಟನೆಗಳ ಪರವಾಗಿ ಸಂಚಾಲಕರಾದ ಎಚ್.ಸಿ. ಕೊಪ್ಪಳ ಹಾಗೂ ಶಾಂತಣ್ಣ ಮುಳವಾಡ ಸಚಿವರಿಗೆ ಮನವಿ ಸಲ್ಲಿಸಿದರು.




ಸಮಾರಂಭದಲ್ಲಿ ಪೀರಸಾಬ ಕೌತಾಳ ಸಂವಿಧಾನದ ಪೀಠಿಕೆಯ ಭಾವಚಿತ್ರವನ್ನು ಅನಾವರಣಗೊಳಿಸಿದರು. ವಿಭಾಗೀಯ ನಿಯಂತ್ರಣಾಧಿಕಾರಿ ಡಿ.ಎಮ್. ದೇವರಾಜ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ಎಸ್.ಎನ್. ಬಳ್ಳಾರಿ, ಗಂಟಿ ಕಾರ್ಮಿಕ ಸಂಘಟನೆಯ ಮುಖಂಡ ಶಾಂತಣ್ಣ ಮುಳವಾಡ ಪಾಲ್ಗೊಂಡಿದ್ದರು.

ಕಾರ್ಮಿಕ ಸಂಘಟನೆಯ ಮುಖಂಡರಾದ ಎಚ್.ಸಿ. ಕೊಪ್ಪಳ, ಎಮ್.ಎಚ್. ಪೂಜಾರ, ಎಸ್.ಎಫ್. ಸಂಗಣ್ಣವರ, ಎಸ್.ಜಿ. ಗೋವಿಂದರಾಜು, ವೀಣಾ ಚವ್ಹಾಣ, ಲಕ್ಷ್ಮಿ ಕುಕನೂರ, ಶ್ರೀಮತಿ ಬದಾಮಿ, ಗೋಪಾಲ ರಾಯರ, ಬಿ.ಎ. ದೊಡ್ಡಮನಿ, ಪಿ.ವಿ. ರಾಮೇನಹಳ್ಳಿ, ಎ.ಕೆ. ಕರನಾಚಿ, ಜಿ.ಆರ್. ಹಾದಿ, ಎಸ್.ಎನ್. ಇಟಗಿ, ವಸಂತ ಬಿ.ಗದಗಿನ, ನಾಗರಾಜ ಬಳ್ಳಾರಿ, ಎಚ್.ವಾಯ್. ಪೂಜಾರ, ಎಂ.ಎಸ್. ನಾಯ್ಕರ, ಚಂದ್ರು ಚಲವಾದಿ, ದ್ವಾರಕೇಶ್ವರ ಮುಂತಾದವರು ಪಾಲ್ಗೊಂಡಿದ್ದರು.

ದಲಿತ ಕಲಾ ಮಂಡಳಿಯ ಅಧ್ಯಕ್ಷ ಶರೀಫ ಬಿಳೆಯಲಿ ತಂಡದವರು ಕ್ರಾಂತಿ ಗೀತೆಗಳನ್ನು ಹಾಡಿದರು. ವಿಭಾಗೀಯ ಸಾರಿಗೆ ಅಧಿಕಾರಿ ಪಿ.ವಿ. ಮೇತ್ರಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ವೇದಾ ಎಸ್.ಕೆ. ಭಜಂತ್ರಿ ಇವರಿಂದ ನೃತ್ಯ ಪ್ರದರ್ಶನ ನಡೆಯಿತು. ಎಫ್.ಎಚ್. ಜಕ್ಕಪ್ಪನವರಿಗೆ ಹಾಗೂ ಮಾವಳ್ಳಿ ಶಂಕರರಿಗೆ ಸರ್ಕಾರ ಕೊಡಮಾಡುವ ಅಂಬೇಡ್ಕರ ಪ್ರಶಸ್ತಿಯನ್ನು ಪ್ರದಾನ ಮಾಡಿದ್ದಕ್ಕೆ ರಸ್ತೆ ಸಾರಿಗೆ ಸಂಸ್ಥೆಯ ಪರವಾಗಿ ಎಚ್.ಸಿ. ಕೊಪ್ಪಳ ಸರ್ಕಾರಕ್ಕೆ ಹಾಗೂ ಸಚಿವರಿಗೆ ಅಭಿನಂದನೆ ಸಲ್ಲಿಸಿದರು.


## ಸಾವಿನಲ್ಲೂ ಒಂದಾದ ಸಹೋದರರು


■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹುಟ್ಟುತ್ತ ಅಣ್ಣತಮ್ಮಂದಿರು, ಬೆಳೆಯುತ್ತ ದಯಾದಿಗಳು ಎಂಬ ಗಾದೆಯೇ ಸಾರ್ವಕಾಲಿಕವಾಗಿರುವ ಕಾಲ ಘಟ್ಟದಲ್ಲಿ ತಾಲೂಕಿನ ಗೋವನಾಳ ಗ್ರಾಮದ ಸಹೋದರರು ಸಾವಿನಲ್ಲೂ ಒಂದಾದ ಹೃದಯಸ್ಪರ್ಶಿ ಘಟನೆ ಬುಧವಾರ ನಡೆದಿದೆ. ಒಡಹುಟ್ಟಿದವರು ಜೀವನದಲ್ಲಿ ಹೇಗೆ ಜೋತೆಗೂಡಿ ಬೆಳೆದು ಬಾಳಿದರೋ, ಹಾಗೆ ಇಬ್ಬರು ಸಾವಿನಲ್ಲಿಯೂ ಒಂದಾಗಿರುವ ಘಟನೆಗೆ ಗ್ರಾಮಸ್ಥರ ಹೃದಯ ಮಿಡಿದಿದೆ.

ಬಸವನಗೌಡ ಶಿವನಗೌಡ ಭುವನಗೌಡ್ರ (75) ಇವರ ಸಹೋದರ ಯಲ್ಲಪ್ಪಗೌಡ ಶಿವನಗೌಡ ಭುವನಗೌಡ್ರ (72) ಇಬ್ಬರೂ ಅನ್ಯೋನ್ಯತೆಯಿಂದ ಜೀವನ ಸಾಗಿಸುತ್ತಿರುವದು ಇತರರಿಗೆ ಮಾದರಿಯಾಗಿತ್ತು. ಕಳೆದ 8 ವರ್ಷದಿಂದ ಅಣ್ಣ ಬಸನಗೌಡ ಪಾರ್ಶ್ವವಾಯುವಿನಿಂದ ಬಳಲುತ್ತಿದ್ದರು. ಇತ್ತ ತಮ್ಮ ಯಲ್ಲಪ್ಪಗೌಡ ಕಳೆದ ಒಂದು ವಾರದ ಹಿಂದೆ ಪಾರ್ಶ್ವವಾಯುವಿಗೆ ತುತ್ತಾಗಿರುವದೂ ವಿಪರ್ಯಾಸವಾಗಿದೆ.

ಬುಧವಾರ ನಸುಕಿನ ವೇಳೆ ಅನಾರೋಗ್ಯದಿಂದ ಬಳಲುತ್ತಿದ್ದ ಅಣ್ಣ ಬಸವನಗೌಡ ಸಾವಿಗೀಡಾದ ಸುದ್ದಿ ತಮ್ಮ ಯಲ್ಲಪ್ಪಗೌಡರಿಗೆ ತಿಳಿಯುತ್ತಿದ್ದಂತೆ ಆತನೂ ಅಲ್ಲಿಯೇ ತಕ್ಷಣದಲ್ಲಿ ಪ್ರಾಣ ಬಿಟ್ಟಿದ್ದಾರೆ. ಮೃತ ಸಹೋದರರ ಕುಟುಂಬಸ್ಥರಿಗೆ ಇಬ್ಬರ ಸಾವು ಬರಸಿಡಿಲು ಬಡಿದಂತಾಗಿದೆ. ಇಬ್ಬರ ಮೃತದೇಹಗಳನ್ನು ಗ್ರಾಮಸ್ಥರು ಒಂದೇ ಸ್ಥಳದಲ್ಲಿ ಅಂತ್ಯಸಂಸ್ಕಾರ ಮಾಡಿ ಕಂಬನಿ ಮಿಡಿದರು. ಇಬ್ಬರಿಗೂ ಇಬ್ಬರು ಪುತ್ರರು, ಓರ್ವ ಪುತ್ರಿ ಇದ್ದಾರೆ.






**ಪುರಸಭೆ ಕಾರ್ಯಾಲಯ, ಮುಂಡರಗಿ**

ಜಿ. ಗದಗ, ಕರ್ನಾಟಕ - 582118

website: www.mundargitown.mrc.gov.in E-mail: ka.mundargi.tmc@gmail.com

ದೂರವಾಣಿ/ಫ್ಯಾಕ್ಸ್: 08371-262638

ಸಂಖ್ಯೆ:ಪುಸಮುಂ/ಸ್ಟೋರ್/ವಹಿ/2025-26/29 ದಿನಾಂಕ: 11-04-2025

**(ವಾರ್ಷಿಕ ಟೆಂಡರ್ ಆಹ್ವಾನ ಪ್ರಕಟಣೆ)**

ಮುಂಡರಗಿ ಪುರಸಭೆ ಸನ್ 2025-26ನೇ ಸಾಲಿನ ಪುರಸಭೆ ಅನುದಾನದಲ್ಲಿ ದಪ್ತರ ಹಾಗೂ ಲೇಖನಿ/ಸ್ಟೇಶನರಿ ಸಾಮಾಗ್ರಿಗಳನ್ನು ಪೂರೈಸಲು ವಾರ್ಷಿಕ ಟೆಂಡರ್ ಕರೆಯಲಾಗಿದ್ದು ವಿವರ ಈ ಕೆಳಗಿನಂತಿದೆ.

| ಕ್ರ.ಸಂ | ಕಾರ್ಯಕ್ರಮದ ವಿವರ | ಅಂದಾಜು ಮೊತ್ತ ಲಕ್ಷಗಳಲ್ಲಿ | ಇ.ಎಂ.ಡಿ | ಫಾರ್ಮ್ ಫೀ |
|---|---|---|---|---|
| 1 | 2025-26ನೇ ಸಾಲಿನ ಪುರಸಭೆ ಅನುದಾನದಲ್ಲಿ ಕಚೇರಿಯ ಕೆಲಸ ಕಾರ್ಯಗಳಿಗಾಗಿ ಅವಶ್ಯವಿರುವ ದಪ್ತರ ಹಾಗೂ ಲೇಖನಿ/ಸ್ಟೇಶನರಿ ಸಾಮಾಗ್ರಿಗಳನ್ನು ಪೂರೈಸುವುದು | 5.00 | 12500/- | 750/- |

ಅರ್ಹ ಪೂರೈಕೆದಾರರು ತಮ್ಮ ದರವಾರುಗಳನ್ನು ನಿಗದಿತ ಅವಧಿಯಲ್ಲಿ ಶೀಲಬಂದ ಲಕೋಟೆಗಳಲ್ಲಿ ಸಲ್ಲಿಸಿತಕ್ಕದು ಅವಧಿ ಮೀರಿ ಬಂದ ದರವಾರುಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲಾ. (ರಜಾ ದಿನಗಳನ್ನು ಹೊರತುಪಡಿಸಿ) ಟೆಂಡರ್ ಮಂಜೂರ ನಾ ಮಂಜೂರ ಮಾಡುವ ಅಧಿಕಾರ ಕಾಯ್ದಿರಿಸಿ ಕೊಂಡಿದೆ.

**ಟೆಂಡರ್ ಷರತ್ತುಗಳು**

**(1)** ಅರ್ಹ ಅಧಿಕೃತ ಪೂರೈಕೆದಾರರು ಖಾಲಿ ಟೆಂಡರಗಳನ್ನು ಕೋರಿ ಅರ್ಜಿ ಸಲ್ಲಿಸುವ ಮತ್ತು ಖಾಲಿ ಟೆಂಡರ್ ಶೆಡ್ಯೂಲ್ (ನಮೂನೆ)-ಬಿ ವಿತರಿಸುವ **ದಿನಾಂಕ: 15-04-2025** ರಿಂದ **ದಿನಾಂಕ: 19-04-2025 4:00** ಗಂಟೆಯ ವರೆಗೆ. **(2)** ಭರಣಾ ಮಾಡಿ ಮುಚ್ಚಿದ ಟೆಂಡರ್ ಫಾರ್ಮಗಳ ಮೇಲೆ ಸನ್ 2025-26 ನೇ ಸಾಲೀನ ಅವಶ್ಯವಿರುವ ದಪ್ತರ ಹಾಗೂ ಲೇಖನಿ/ಸ್ಟೇಶನರಿ ಸಾಮಾಗ್ರಿಗಳು ಪೂರೈಸುವ ಕುರಿತು ಅಂತಾ ಬರೆದು ಟೆಂಡರ ಪೆಟ್ಟಿಗೆಯಲ್ಲಿ ಹಾಕಲು ನಿಗಧಿಪಡಿಸಿದ **ದಿನಾಂಕ: 21-04-2025** ಸಾಯಂಕಾಲ 4:00 ಗಂಟೆಯೊಳಗಾಗಿ ಮುಂಡರಗಿ ಪುರಸಭೆ ಕಾರ್ಯಾಲಯದಲ್ಲಿ ಇಟ್ಟಂತಹ ಟೆಂಡರ್ ಪೆಟ್ಟಿಗೆಯಲ್ಲಿ ಟೆಂಡರ ಹಾಕತಕ್ಕದ್ದು. ಟೆಂಡರ ತೆರೆಯುವ ಗುತ್ತಿಗೆದಾರರ ಹಾಜರಾತಿಯಲ್ಲಿ ಅಂದೇ ಅಥವಾ ಮುಂದಿನ ಯಾವುದಾದರು ಕೆಲಸದ ಅವಧಿಯಲ್ಲಿ ಪುರಸಭೆ ಕಚೇರಿಯಲ್ಲಿ ತೆರೆಯಲಾಗುವುದು.

**ವಿಶೇಷ ಸೂಚನೆ:** ಟೆಂಡರ ಬಿಡ್ ಶೆಡ್ಯೂಲ್ (ನಮೂನೆ)-ಬಿ ನಲ್ಲಿರುವ ಷರತ್ತುಗಳು ಅನ್ವಯಿಸುತ್ತದೆ.

ಸಹಿ/- ಮುಖ್ಯಾಧಿಕಾರಿ
ಪುರಸಭೆ ಮುಂಡರಗಿ

ವಾ.ಸಾ.ಇ/ಗದಗ/27/ದೇಶಪಾಂಡೆಪಬ್ಲಿಸಿಟಿ/2025-26


## ವಿಶೇಷ ಆಯ್ಕೆ ಶಿಬಿರ ಆಯೋಜನೆ

■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ 2025-26ನೇ ಸಾಲಿನಲ್ಲಿ ಕ್ರೀಡಾ ವಸತಿ ಶಾಲೆ/ ನಿಲಯಗಳಿಗೆ 8ನೇ ತರಗತಿ ಮತ್ತು ಪ್ರಥಮ ಪಿ.ಯು.ಸಿ ಮಟ್ಟದ ಅರ್ಹ ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಪ್ರವೇಶಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಈಗಾಗಲೇ ಜಿಲ್ಲಾ ಹಾಗೂ ವಿಭಾಗ ಮಟ್ಟದಲ್ಲಿ ಆಯ್ಕೆ ಪ್ರಕ್ರಿಯೆ ನಡೆಸಲಾಗಿದೆ. ಆದರೆ ಸದರಿ ಆಯ್ಕೆ ಶಿಬಿರಗಳಲ್ಲಿ ವಿವಿಧ ಕಾರಣಗಳಿಂದ ಭಾಗವಹಿಸಲು ಸಾಧ್ಯವಾಗದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶವನ್ನು ನೀಡುವ ದೃಷ್ಟಿಯಿಂದ ರಾಜ್ಯದ ಕೆಲವು ಸ್ಥಳಗಳಲ್ಲಿ ವಿಶೇಷ ಆಯ್ಕೆ ಶಿಬಿರಗಳನ್ನು ಆಯೋಜಿಸಲು ಉದ್ದೇಶಿಸಲಾಗಿದೆ.

ಈ ವಿಶೇಷ ಆಯ್ಕೆ ಶಿಬಿರದಲ್ಲಿ ರಾಜ್ಯದ ಯಾವುದೇ ಭಾಗದ ಕ್ರೀಡಾಪಟುಗಳು ಭಾಗವಹಿಸಲು ಮುಕ್ತ ಅವಕಾಶವಿದೆ. 2025-26ನೇ ಸಾಲಿನ ಪ್ರವೇಶಕ್ಕೆ ಈಗಾಗಲೇ ಆಯೋಜಿಸಲಾದ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸದ ಅಭ್ಯರ್ಥಿಗಳು ಈ ವಿಶೇಷ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸಬಹುದು. ಈಗಾಗಲೇ ಆಯ್ಕೆ ಶಿಬಿರಗಳಲ್ಲಿ ಭಾಗಿಯಾಗಿರುವ ಆದರೆ, ರಾಜ್ಯ ಮಟ್ಟದ ಆಯ್ಕೆ ಶಿಬಿರಕ್ಕೆ ಆಯ್ಕೆಯಾಗದ ಅಭ್ಯರ್ಥಿಗಳು ತಮ್ಮ ಪ್ರದರ್ಶನವನ್ನು ಉತ್ತಮಪಡಿಸಿಕೊಳ್ಳಲು ಉದ್ದೇಶಿಸಿದಲ್ಲಿ ಈ ಬಗ್ಗೆ ಅರ್ಜಿ ನಮೂನೆಯಲ್ಲಿ ಕಡ್ಡಾಯವಾಗಿ ದಾಖಲಿಸಿ ವಿಶೇಷ ಆಯ್ಕೆ ಶಿಬಿರದಲ್ಲಿ ಭಾಗವಹಿಸಬಹುದು.

8ನೇ ತರಗತಿಗೆ ಪ್ರವೇಶ ಬಯಸುವ ಅಭ್ಯರ್ಥಿಗಳು ಪ್ರಸ್ತುತ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, 8ನೇ ತರಗತಿ ಪ್ರವೇಶಕ್ಕೆ ಜೂನ್-2025 ಕ್ಕೆ ಅನ್ವಯವಾಗುವಂತೆ 14 ವರ್ಷ ವಯಸ್ಸಿನ ಒಳಗೆ ಇರಬೇಕು. ಪ್ರಥಮ ಪಿ.ಯು.ಸಿ. ಪ್ರವೇಶ ಬಯಸುವ ಅಭ್ಯರ್ಥಿಗಳ ವಯಸ್ಸು ಜೂನ್-2025ಕ್ಕೆ ಅನ್ವಯವಾಗುವಂತೆ 18 ವರ್ಷ ವಯಸ್ಸಿನ ಒಳಗೆ ಇರಬೇಕು.

ಹಾಕಿ ಕ್ರೀಡೆಯ ಆಯ್ಕೆ ಪ್ರಕ್ರಿಯೆಯು ಗದಗ-ಬೆಟಗೇರಿಯ ಗಾಂಧಿ ನಗರದ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಎಪ್ರಿಲ್ 17ರಂದು ಬೆಳಿಗ್ಗೆ 9 ಗಂಟೆಗೆ ಜರುಗಲಿದೆ. ಹೆಚ್ಚಿನ ಮಾಹಿತಿಗಾಗಿ-ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣ, ಗಾಂಧಿ ನಗರ, ಬೆಟಗೇರಿ-ಗದಗ, ದೂರವಾಣಿ ಸಂಖ್ಯೆ-9036533909 ಇಲ್ಲಿಗೆ ಸಂಪರ್ಕಿಸಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka